ವಿಜಯಪುರ | ಸಂಪುಟ 02 | ಸಂಚಿಕೆ 72 | ಪುಟ 4 | ₹ 3.00

https://udayarashminews.com

udayarashmi 7026028778

# ಉದಯ ರಶ್ಮಿ

Udayarashmi Kannada Daily

ಜನಪರ-ಜೀವಪರ

ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ

Editor: Indushekhar Manur

editor.udayarashmi@gmail.com RNI NO: KARKAN/2023/86203 ಸೋಮವಾರ, ಮೇ 06, 2024



"ಕಾಂಗ್ರೆಸ್ ಸರ್ಕಾರ ಜಾರಿಗೊಳಿಸಿರುವ ಗ್ಯಾರಂಟಿ ಯೋಜನೆಯಡಿ ಅನೇಕರಿಗೆ ಆಗಿರುವ ಅನ್ಯಾಯವನ್ನು ನಾವು ಸಮರ್ಥ-ವಾಗಿ ಬಿಂಬಿಸಿದ್ದೇವೆ. ಒಂದೇ ವರ್ಷದಲ್ಲಿ ಕಾಂಗ್ರೆಸ್ ಸರ್ಕಾರದ ಬಗ್ಗೆ ರಾಜ್ಯದ ಜನತೆಗೆ ಭ್ರಮನಿರಸನವಾಗಿದೆ."

– ಅರುಣ ಶಹಾಪೂರ

ಬಿಜೆಪಿ ಚುನಾವಣೆ ಸಂಚಾಲಕರು

ಉದಯರಶ್ಮಿ ದಿನಪತ್ರಿಕೆ

**ಮಹಿಳೆಯ ಅಪಹರಣ ಪ್ರಕರಣ | ನಾಲ್ಕು ದಿನ ಎಸ್‌ಐಟಿ ವಶಕ್ಕೆ | ರಾಜಕೀಯ ಷಡ್ಯಂತ್ರದಿಂದ ಬಂಧನವೆಂದ ರೇವಣ್ಣ**

# ಮಾಜಿ ಸಚಿವ ಹೆಚ್.ಡಿ ರೇವಣ್ಣ ಅರೆಸ್ಟ್! :ಎಸ್‌ಐಟಿ ವಶಕ್ಕೆ

ಬೆಂಗಳೂರು: ಲೈಂಗಿಕ ದೌರ್ಜನ್ಯ ಪ್ರಕರಣದ ಸಂತ್ರಸ್ತೆ ಎನ್ನಲಾದ ಮನೆ ಕೆಲಸದ ಮಹಿಳೆಯ ಅಪಹರಣ ಪ್ರಕರಣದಲ್ಲಿ ಬಂಧಿತರಾಗಿರುವ ಶಾಸಕ ಹೆಚ್.ಡಿ ರೇವಣ್ಣ ಅವರನ್ನು ನಾಲ್ಕು ದಿನಗಳ ಕಾಲ ವಿಶೇಷ ತನಿಖಾ ತಂಡ (ಎಸ್‌ಐಟಿ) ವಶಕ್ಕೆ ನೀಡಿ ನ್ಯಾಯಾಧೀಶರು ಆದೇಶಿಸಿದ್ದಾರೆ.

ರೇವಣ್ಣ ಅವರನ್ನು ನಿನ್ನೆ (ಮೇ 4) ಬೆಂಗಳೂರಿನ ಪದ್ಮನಾಭ ನಗರದ ಹೆಚ್.ಡಿ ದೇವೇಗೌಡರ ಮನೆಯಿಂದ ಎಸ್‌ಐಟಿ ಬಂಧಿಸಿತ್ತು. ಇಂದು ಅವರನ್ನು ಬೌರಿಂಗ್ ಆಸ್ಪತ್ರೆಯಲ್ಲಿ ವೈದ್ಯಕೀಯ ತಪಾಸಣೆಗೆ ಒಳಪಡಿಸಿದ ಬಳಿಕ ಕೋರಮಂಗಲದಲ್ಲಿರುವ ನಿವಾಸದಲ್ಲಿ ನ್ಯಾಯಾಧೀಶರಾದ ರವೀಂದ್ರ ಕಟ್ಟಿಮನಿ ಮುಂದೆ ಹಾಜರುಪಡಿಸಿತ್ತು. ರೇವಣ್ಣ ಅವರನ್ನು ಕಸ್ಟಡಿಗೆ ನೀಡುವಂತೆ ಮನವಿ ಮಾಡಿತ್ತು.

**ರಾಜಕೀಯ ಷಡ್ಯಂತ್ರದಿಂದ ಬಂಧನ**

ಲೈಂಗಿಕ ದೌರ್ಜನ್ಯದ ಸಂತ್ರಸ್ತೆ ಎನ್ನಲಾದ ಮನೆ ಕೆಲಸದ ಮಹಿಳೆಯನ್ನು ಅಪಹರಿಸಿದ ಪ್ರಕರಣದಲ್ಲಿ ಎಸ್‌ಐಟಿಯಿಂದ ಬಂಧಿತರಾದ ಬಳಿಕ ಮೊದಲ ಬಾರಿಗೆ ಶಾಸಕ ಹೆಚ್.ಡಿ ರೇವಣ್ಣ ಪ್ರತಿಕ್ರಿಯೆ



ನೀಡಿದ್ದಾರೆ.

ಬೆಂಗಳೂರಿನ ಬೌರಿಂಗ್ ಆಸ್ಪತ್ರೆ ಬಳಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, "ನನ್ನ 40 ವರ್ಷಗಳ ರಾಜಕೀಯ ಜೀವನದಲ್ಲಿ ಯಾವುದೇ ಆಪಾದನೆಗಳು ಇರಲಿಲ್ಲ. ಇದು ರಾಜಕೀಯ ಷಡ್ಯಂತ್ರ" ಎಂದಿದ್ದಾರೆ.

ಏಪ್ರಿಲ್ 28ನೇ ತಾರೀಖು ನನ್ನ ಮೇಲೆ ದೂರು ನೀಡಿದ್ದಾರೆ. ಆದರೆ, ಯಾವುದೇ ಪುರಾವೆ ಸಿಕ್ಕಿಲ್ಲ ಎಂದು ಅಪಹರಣ ಕೇಸ್ ಹಾಕಿದ್ದಾರೆ. ಮೇ 2ನೇ ತಾರೀಖಿನ ಪ್ರಕರಣದಲ್ಲೂ ಯಾವುದೇ ಪುರಾವೆ ಇಲ್ಲ. ಪೂರ್ತಿ ವಿಷಯವನ್ನು ನಾನು ಹೇಳ್ತೀನಿ, ಇದು ರಾಜಕೀಯ ಷಡ್ಯಂತ್ರ. ಇದನ್ನು ಎದುರಿಸುವ ಶಕ್ತಿ ನನಗಿದೆ" ಎಂದು ರೇವಣ್ಣ ಹೇಳಿದ್ದಾರೆ.

ರೇವಣ್ಣ ಮಾಧ್ಯಮಗಳಿಗೆ ಹೆಚ್ಚು ಹೇಳಿಕೆ ನೀಡಲು ಅವಕಾಶ ನೀಡದ ಎಸ್‌ಐಟಿ ಅಧಿಕಾರಿಗಳು ಅವರನ್ನು ವೈದ್ಯಕೀಯ ತಪಾಸಣೆ ಬೌರಿಂಗ್ ಆಸ್ಪತ್ರೆಯ ಒಳಗೆ ಕರೆದುಕೊಂಡು ಹೋಗಿದ್ದಾರೆ.


ಲೈಂಗಿಕ ದೌರ್ಜನ್ಯ ಆರೋಪ ಕೇಳಿ ಬಂದ ಬೆನ್ನಲ್ಲೇ ರೇವಣ್ಣ ಮನೆಯಲ್ಲಿ ಕೆಲಸಕ್ಕಿದ್ದ ಮೈಸೂರಿನ ಕೆಆರ್ ನಗರ ಮೂಲದ ಮಹಿಳೆಯನ್ನು ಅಪಹ-ರಿಸಲಾಗಿದೆ ಎಂದು ಆಕೆಯ ಮಗ ರಾಜು ಎಂಬಾತ ಕೆಆರ್ ನಗರ ಪೊಲೀಸ್ ಠಾಣೆಗೆ ದೂರು ನೀಡಿದ್ದರು.

ಈ ಪ್ರಕರಣದಲ್ಲಿ ನಿರೀಕ್ಷಣಾ ಜಾಮೀನು ಕೋರಿ ರೇವಣ್ಣ ಬೆಂಗಳೂರಿನ ಜನ ಪ್ರತಿನಿಧಿಗಳ ವಿಶೇಷ ನ್ಯಾಯಾಲಯಕ್ಕೆ ಅರ್ಜಿ ಸಲ್ಲಿಸಿದ್ದರು. ಆದರೆ, ನ್ಯಾಯಾಲಯ ಜಾಮೀನು ನೀಡಲು ನಿರಾಕರಿಸಿತ್ತು. ಈ ಬೆನ್ನಲ್ಲೇ ರೇವಣ್ಣ ಅವರನ್ನು ಎಸ್‌ಐಟಿ ಬಂಧಿಸಿದೆ.

## ರಾಜ ನುಡಿ

ವಾಸ್ಕೋ-ಡ-ಗಾಮ ಭಾರತವನ್ನು ಕಂಡು ಹಿಡಿದ. ವಾಸ್ಕೋ-ಡ-ಗಾಮ ಭಾರತಕ್ಕೆ ಸಮುದ್ರ ಮಾರ್ಗ ಕಂಡು ಹಿಡಿದ. ಇಲ್ಲಿ ಎರಡು ದೃಷ್ಟಿಕೋನಗಳಿವೆ. ಒಂದು ಸುಳ್ಳನ್ನು ಸತ್ಯವೆಂದು ಬಿಂಬಿಸುವುದು. ಮತ್ತೊಂದು ಸತ್ಯವನ್ನು ಇದ್ದಂತೆ ಒಪ್ಪಿಕೊಳ್ಳುವುದು. ದೃಷ್ಟಿಕೋನ ವಿಶಾಲವಾದರೆ ದೈವತ್ವ. ಸಂಕುಚಿತವಾದರೆ ದಾರಿದ್ರ.

-ಡಾ. ರಾಜಶೇಖರ ನಾಗೂರ



## ವಚನ ಚಿಂತನ 373

*ಕಾಯದೊಳಗಣ ಕೂಟವ ಬಿಟ್ಟು,*
*ಕಣ್ಣಿನೊಳಗಣ ನೋಟವ ಬಿಟ್ಟು,*
*ಮನದೊಳಗಣ ಜಗದಾಟವ ಬಿಟ್ಟು,*
*ಏತರಲ್ಲಿದ್ದೂ ಕಲೆದೋರದೆ, ಕಂಜಪತ್ರದ ಅಂಬುವಿನಂತೆ,ಸಗರದ ಬೊಮ್ಮನೊಡೆಯ ತನುಮನ ಸಂಗಮೇಶ್ವರನು.*

ಈ ವಚನದಲ್ಲಿ ಸಗರದ ಬೊಮ್ಮಣ್ಣನವರು ದೇವರ ಹುಡುಕಾಟದಲ್ಲಿ ತೊಡಗಿದ್ದು ಅಂತಿಮವಾಗಿ ದೇವರ ಇರುವಿಕೆಯನ್ನು ಗುರುತಿ ಸುತ್ತ ಅದು ಇದ್ದು ಮರೆಯಾಗುವ ಸ್ಥಿತಿ ಎಂಬ ಅಭಿಪ್ರಾಯಕ್ಕೆ ಬಂದಿದ್ದಾರೆ. ವಚನದ ಪ್ರಾರಂಭದ ಸಾಲಿನಲ್ಲಿ "ಕಾಯದೊಳಗಣ ಕೂಟವ ಬಿಟ್ಟು" ಎನ್ನುವಲ್ಲಿ ದೇವರ ಅನುಭವವು ಅಂಗಕ್ಕೆ ಆಗು ತ್ತದೆ ಎಂದು ಭಾವಿಸುತ್ತಾ ಅಂಗದ ಅವಯವಗಳಲ್ಲಿ ದೇವರನ್ನು ಹುಡುಕಿದ್ದಾರೆ, ಅಲ್ಲಿ ಅವನಿಲ್ಲ ಎಂಬುದು ಗೊತ್ತಾದಾಗ ಅಂಗ ದಿಂದ ಆಚೆಗಿನ ವಸ್ತುಗಳಲ್ಲಿ ಅರಸುತ್ತ ನೋಡಿ ನಲಿಯಬಹು ದೆಂಬ ಭ್ರಮೆ ಯಿಂದ ಹುಡುಕಿ ಬಳಲಿದಾಗ ಕಣ್ಣಿಗೆ ಗೋಚರಿಸದ್ದನ್ನು " ಕಣ್ಣಿನೊಳಗಣ ನೋಟವ ಬಿಟ್ಟು," ಎಲ್ಲಿರುವೆ ಎಂದು ಪ್ರಶ್ನಿ ಸಿದ್ದಾರೆ. ಅಂಗದ ಅವಯವಗಳು ಹಾಗೂ ವಸ್ತುಗಳಲ್ಲಿ ಅವನಿಲ್ಲ ಎಂದು ಅರಿತಾಗ, ಮನದಲಿ ಮನೆ ಮಾಡಿರುವನೇ ಎಂದು ಮನವ ಇಣುಕಿ ನೋಡಿದ್ದಾರೆ, ಅಲ್ಲಿಯೂ ಕಾಣುತ್ತಿಲ್ಲ (ಮನದೊಳಗಣ ಜಗದಾಟವ ಬಿಟ್ಟು,) ಕೊನೆಗೆ ದೇವರನ್ನೇ ಪ್ರಶ್ನಿಸುತ್ತ ಎಲ್ಲಿರುವೆ ರೂಪ ರಹಿತನಾಗಿ ಎಂದು ಕೇಳಿದ್ದಾರೆ(ಏತರಲ್ಲಿದ್ದೂ ಕಲೆದೋರ ದ) ಅಂತಿಮವಾಗಿ ಆತನ ಇರುವಿಕೆಯನ್ನು ಗುರುತಿಸುತ್ತ ಅದು ಕಣ್ಣಿಗೆ ಕಂಡರೂ ಕ್ಷಣದಲ್ಲಿ ಮರೆಯಾಗುವ ಎಲೆಯ ಮೇಲೆ ಹೊಳೆದು ಆವಿಯಾಗಿ ಇಲ್ಲದಂತಾಗುವ ನೀರಿನ ಬಿಂದುವಿನಂತೆ (ಕಂಜಪತ್ರ=ತಾವರೆಯ ಎಲೆ , ಅಂಬು = ನೀರಹನಿ,ವಿನಂತೆ,) ಎಂದಿದ್ದಾರೆ. ಅಂಬಿಗರ ಚೌಡಯ್ಯನವರು ಇದೇ ಭಾವದಲ್ಲಿ "ಅಡವಿಯೊಳಗರಸುವಡೆ ಸಿಡಿಗಂಟಿ ತಾನಲ್ಲ.ಮಡುವಿನೊಳಗರಸುವಡೆ ಮತ್ಸ್ಯಮಂಡೂಕನಲ್ಲ. ತಪಂಬಡುವಡೆ ವೇಷಕ್ಕೆ ವೇಳೆಯಲ್ಲ. ಒಡಲದಂಡಿಸುವಡೆ ಕೊಡುವ ಸಾಲಿಗನಲ್ಲ." ಎಂದಿದ್ದಾರೆ. ಶರಣರು ದೇವರನ್ನು ರೂಪಿನಿಂದಾಚೆ ಚೈತನ್ಯದಲ್ಲಿ ಕಂಡಿದ್ದಾರೆ.'."

-ರುದ್ರೇಶ ಕಿತ್ತೂರ, ಮುದ್ದೇಬಿಹಾಳ

## ಕಾಯಕ ಸಿದ್ಧಾಂತ ವಿಶ್ವಕ್ಕೆ ಹರಡಿದ ಮೋದಿ



ಉದಯರಶ್ಮಿ ನ್ಯೂಸ್

ಬಸವನಬಾಗೇವಾಡಿ: ಬಿಜೆಪಿ, ಜೆಡಿ-ಎಸ್ ಎರಡು ಪಕ್ಷದ ಕಾರ್ಯಕರ್ತರು ಮನೆ ಮನೆಗೆ ತೆರಳಿ ಕೇಂದ್ರ ಸರ್ಕಾರದ ಅಭಿವೃದ್ಧಿ ಕಾರ್ಯಗಳನ್ನು ತಿಳಿಸಿ ಮತಯಾಚನೆ ಮಾಡುವ ಮೂಲಕ ಹೆಚ್ಚಿನ ಮತಗಳು ರಮೇಶ ಜಿಗಜಿಣಗಿ ಅವರಿಗೆ ಬರುವಂತೆ ನೋಡಿಕೊಳ್ಳಬೇಕು ಎಂದು ಕೇಂದ್ರ ಸಚಿವೆ ಶೊಭಾ ಕರಂದ್ಲಾಜೆ ಹೇಳಿದರು.

ಪಟ್ಟಣದ ಬಸವೇಶ್ವರ ವೃತ್ತದಲ್ಲಿ ಶನಿವಾರ ಬಿಜೆಪಿ ಅಭ್ಯರ್ಥಿ ರಮೇಶ ಜಿಗಜಿಣಗಿ ಪರ ರೋಡ್ ಶೋ ಮೂಲಕ ಮತಯಾಚಿಸಿ ಅವರು ಮಾತನಾಡಿದರು.

ನರೇಂದ್ರ ಮೋದಿ ಅವರು ಪ್ರಧಾನಿಯಾದ ಮೇಲೆ ಬಸವಣ್ಣನವರ ವಚನಗಳ ಪುಸ್ತಕಗಳನ್ನು ವಿವಿಧ ಭಾಷೆಗಳಲ್ಲಿ ಭಾಷಾಂತರಿಸುವುದರೊಂದಿಗೆ ಅವರ ಕಾಯಕ ದಾಸೋಹ ಸಿದ್ಧಾಂತವನ್ನು ದೇಶ ಸೇರಿದಂತೆ ವಿವಿಧ ದೇಶಗಳಿಗೆ ಹರಡುವಂತೆ ಮಾಡಿದ್ದಾರೆ ಎಂದರು..

ಅಭ್ಯರ್ಥಿ ರಮೇಶ ಜಿಗಜಿಣಗಿ ಮತ ಯಾಚಿಸಿ ಮಾತನಾಡಿದರು.

**ಗೆಲುವು ನನ್ನದೇ | ಬಿಜೆಪಿ ಅಭ್ಯರ್ಥಿ ಜಿಗಜಿಣಗಿ ವಿಶ್ವಾಸ | ಡಿಎಸ್‌ಎಸ್ ಬಗ್ಗೆ ನನಗೆ ಗೌರವವಿದೆ**

## ನಾನು ಯಾವತ್ತೂ ಜಾತಿ ರಾಜಕಾರಣ ಮಾಡಿಲ್ಲ

ಉದಯರಶ್ಮಿ ನ್ಯೂಸ್

ವಿಜಯಪುರ: ಪ್ರಸಕ್ತ ಲೋಕಸಭಾ ಚುನಾವಣೆಯಲ್ಲಿ ಈ ಬಾರಿಯೂ ನಾನು ಗೆಲ್ಲುತ್ತೇನೆ ಎಂದು ಸಂಸದ ಹಾಗೂ ವಿಜಯಪುರ ಮೀಸಲು ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ರಮೇಶ ಜಿಗಜಿಣಗಿ ವಿಶ್ವಾಸ ವ್ಯಕ್ತಪಡಿಸಿದರು.

ನಗರದಲ್ಲಿ ರವಿವಾರ ಪತ್ರಿಕಾಗೋಷ್ಠಿ ನಡಸಿದ ಅವರು, ಕಳೆದ ಚುನಾವಣೆಗಿಂತಲೂ ಈ ಚುನಾವಣೆಯಲ್ಲಿ ಒಂದು ಮತ ಹೆಚ್ಚಿಗೆ ಪಡೆಯುತ್ತೇನೆ. ಒಂದು ಮತದ ಅಂತರದಿಂದಾದರೂ ನಾನು ಗೆದ್ದೇ ಗೆಲ್ಲುತ್ತೇನೆ ಎಂದು ಹೇಳಿದರು.

ನಾನು ಸಮಾಜದ ಎಲ್ಲ ವರ್ಗದ ಜನರ ಪ್ರೀತಿ, ವಿಶ್ವಾಸ ಗಳಿಸಿದ್ದೇನೆ. ಜಿಲ್ಲೆಯಲ್ಲಿ ಎಲ್ಲಿಯೇ ಪ್ರಚಾರಕ್ಕೆ ಹೋದರೂ ಜನತೆ ನನಗೆ ಹೆಚ್ಚಿನ ಪ್ರೀತಿ, ಒಲವು ತೋ-ರಿಸುತ್ತಿದ್ದಾರೆ. ನನ್ನ ಬಗ್ಗೆ ಯಾರು ಏನೇ ಅಪಪ್ರಚಾರ ಮಾಡಿದರೂ ಜನರು ಅದಕ್ಕೆ ಕಿವಿಗೊಡುವುದಿಲ್ಲ.ಈ ಚುನಾವಣೆಯಲ್ಲೂ ನನ್ನ ಗೆಲುವು ನಿಶ್ಚಿತ ಎಂದರು.



ನಾನು ಯಾವತ್ತೂ ಜಾತಿ ರಾಜಕಾರಣ ಮಾಡಿಲ್ಲ. ನನ್ನ ಸಮುದಾಯದಿಂದಲೇ ನಾನು ಅಂತರ ಕಾಯ್ದುಕೊಂಡಿದ್ದೇನೆ. ಎಲ್ಲ ಸಮುದಾಯದವರನ್ನು ನನ್ನ ಜೊತೆಗೆ ತೆಗೆದುಕೊಂಡು ಬಂದಿದ್ದೇನೆ. ಅವರನ್ನು ಹೆಗಲ ಮೇಲೆ ಕೂರಿಸಿಕೊಂಡಿದ್ದೇನೆ. ಮೇಲ್ವರ್ಗದವರಿಗೆ ನನ್ನಿಂದ ಯಾವತ್ತೂ ಅನ್ಯಾಯವಾಗಿಲ್ಲ. ಮೇಲ್ವರ್ಗದ ಹಲವು ನಾಯಕರ ಬೆಳವಣಿಗೆಗೆ ಸ್ವತ; ಸಹಕಾರ ನೀಡಿದ್ದೇನೆ. ಆದರೆ ಕೆಲವರು ವಿನಾಕಾರಣ ನನ್ನ ಮೇಲೆ ಸುಳ್ಳು ಆರೋಪ ಮಾಡುತ್ತಿದ್ದಾರೆ ಎಂದು ಪತ್ರಕರ್ತರ ಪ್ರಶ್ನೆಯೊಂದಕ್ಕೆ ಜಿಗಜಿಣಗಿ ಉತ್ತರಿಸಿದರು.

ನಾನು ಮತಯಾಚಿಸಲು ಹಳ್ಳಿಗಳಿಗೆ ಹೋದಾಗ ನನ್ನ ಮುಂದೆ ಹಲವರು ಕಾಂಗ್ರೆಸ್ ಅಭ್ಯರ್ಥಿ ರಾಜು ಆಲಗೂರ ಅವರ ಬಗ್ಗೆ ಪ್ರಸ್ತಾಪಿಸಿ ಅವರು ಈ ಚುನಾವಣೆಯಲ್ಲಿ ಆಯ್ಕೆಯಾದರೆ ಡಿಎಸ್‌ಎಸ್ ನವರಿಂದ ಲಿಂಗಾಯತರಿಗೆ ಸಮಸ್ಯೆಯಾಗುತ್ತದೆ ಎಂದು ಹೇಳಿದ್ದು ನಿಜ. ರಾಜು ಆಲಗೂರ ಅವರು ಒಳ್ಳೆಯವರು. ಡಿಎಸ್‌ಎಸ್ ಬಗ್ಗೆ ನನಗೆ ಗೌರವವಿದೆ. ನಾನೂ ಅದೇ ಸಮುದಾಯದವನಿದ್ದೇನೆ. ರಾಜು ಆಲಗೂರ ಅವರ ಬಗ್ಗೆ ನಾನು ವೈಯಕ್ತಿಕವಾಗಿ ಆ ರೀತಿ ಹೇಳಿದ್ದಲ್ಲ. ಅದು ಜನರು ಆಡಿದ ಮಾತು

ಎಂದು ಪತ್ರಕರ್ತರ ಪ್ರಶ್ನೆಗೆ ಉತ್ತ-ರಿಸುತ್ತ ಸ್ಪಷ್ಟಪಡಿಸಿದರು.

ಲೋಕಸಭೆ ಸಾರ್ವತ್ರಿಕ ಚುನಾವಣೆಯಲ್ಲಿ ಮತ್ತೆ ಬಿಜೆಪಿ ಹೆಚ್ಚು ಸ್ಥಾನಗಳನ್ನು ಗೆದ್ದು ಕೇಂದ್ರದಲ್ಲಿ ಅಧಿಕಾರಕ್ಕೆ ಬರಲಿದ್ದು, ನರೇಂದ್ರ ಮೋದಿಯವರು ಮೂರನೇ ಬಾರಿಯೂ ಮತ್ತೆ ಪ್ರಧಾನಿಯಾಗಲಿದ್ದಾರೆ ಎಂದು ಅವರು ಹೇಳಿದರು.

ಪ್ರಧಾನಿ ಮೋದಿ ಒಬ್ಬ ದೈವೀಪುರುಷ. ಅವರು ಪ್ರಧಾನಿಯಾದ ಬಳಿಕ ದೇಶದಲ್ಲಿ ಸಾಕಷ್ಟು ಅಭಿವೃದ್ಧಿ ಕೆಲಸಗಳಾಗಿವೆ. ಜಗತ್ತಿನ ಯಾವ ಶಕ್ತಿಯೂ ಮೋದಿಯವರು ಮತ್ತೆ ಪ್ರಧಾನಿಯಾಗುವುದನ್ನು ತಪ್ಪಿಸಲು ಸಾಧ್ಯವಿಲ್ಲ ಎಂದು ಜಿಗಜಿಣಗಿ ನುಡಿದರು.

ಪತ್ರಿಕಾಗೋಷ್ಠಿಯಲ್ಲಿ ಮಾಜಿ ಸಚಿವರಾದ ಎಸ್.ಕೆ.ಬೆಳ್ಳುಬ್ಬಿ, ಅಪ್ಪು ಪಟ್ಟಣಶೆಟ್ಟಿ, ವಿಧಾನ ಪರಿಷತ್ ಮಾಜಿ ಸದಸ್ಯ ಅರುಣ ಶಹಾಪುರ, ಬಿಜೆಪಿ ಜಿಲ್ಲಾಧ್ಯಕ್ಷ ಆರ್.ಎಸ್.ಪಾಟೀಲ ಕೂಚಬಾಳ. ಬಿಜೆಪಿ ಮುಖಂಡ ವಿಜುಗೌಡ ಪಾಟೀಲ, ಬಿಜೆಪಿ ಮಾಧ್ಯಮ ಪ್ರಮುಖ ವಿಜಯ ಜೋಶಿ ಹಾಗೂ ಇನ್ನಿತರರು ಉಪಸ್ಥಿತ-ರಿದ್ದರು.

**ಕಾಂಗ್ರೆಸ್‌ಗೆ ಬೆಂಬಲ ಘೋಷಿಸಿದ ಪಂಚಮಸಾಲಿ ಸಮುದಾಯ | ಬೃಹತ್ ಚಿಂತನಾ ಸಮಾವೇಶ**

## ಅನ್ಯಾಯ ಸರಿಪಡಿಸಲು ಕಾಂಗ್ರೆಸ್ ಗೆ ಬೆಂಬಲ ಅಗತ್ಯ :ಶಾಸಕ ಮನಗೂಳಿ

ಉದಯರಶ್ಮಿ ನ್ಯೂಸ್

ಇಂಚಗೇರಿ: ಲಿಂಗಾಯತ ಪಂಚಮಸಾಲಿ ಸಮಾಜಕ್ಕೆ ಆಗಿರುವ ಅನ್ಯಾಯ ಸರಿದೂಗಿಸಲು ನಾವು ಕಾಂಗ್ರೆಸ್ ಪಕ್ಷಕ್ಕೆ ಬೆಂಬಲ ನೀಡುವುದು ಅಗತ್ಯವಾಗಿದೆ ಎಂದು ಸಿಂದಗಿ ಶಾಸಕ ಅಶೋಕ ಮನಗೂಳಿ ಹೇಳಿದರು.

ಇಲ್ಲಿ ಶನಿವಾರ ರಾತ್ರಿ ನಡೆದ ಲಿಂಗಾಯತ ಪಂಚಮಸಾಲಿ ಸಮುದಾಯದ ಬೃಹತ್ ಸಮಾವೇಶದಲ್ಲಿ ಮಾತನಾಡಿ, ಕಳೆದ ಕೆಲ ವರ್ಷಗಳಿಂದ ನಮ್ಮ ಸಮಾಜ ತುಳಿತಕ್ಕೆ ಒಳಗಾಗಿದೆ. ನನಗೆ ಟಿಕೆಟ್ ನೀಡಿ ಶಾಸಕನಾಗಿ ಮಾಡಿದ್ದು ಕಾಂಗ್ರೆಸ್ ಪಕ್ಷ. ಬಿಜೆಪಿ ಪಕ್ಷದವರು ಅಧಿಕಾರದಲ್ಲಿದ್ದಾಗ ಜಿಲ್ಲೆಗೆ ಮಂತ್ರಿ ಸ್ಥಾನ ನೀಡಲಿಲ್ಲ. ನಮ್ಮನ್ನು ಗೌರವಿಸಿದ್ದು, ಆತ್ಮಾಭಿಮಾನ ಹೆಚ್ಚಿಸಿದ್ದು ಕಾಂಗ್ರೆಸ್ ಪಕ್ಷ. ಹಾಗಾಗಿ ವಿದ್ಯಾವಂತ, ಸಜ್ಜನರಾಗಿರುವ ಅಭ್ಯರ್ಥಿ ಆಲಗೂರ-ರಿಗೆ ಮತ ನೀಡಬೇಕಾಗಿರುವುದು ನಮ್ಮ ಕರ್ತವ್ಯ. ಅವರಿಂದ ಎಲ್ಲ ಸಮಾಜದ ಜನರಿಗೆ ಒಳಿತಾಗಲಿದೆ ಎಂದು ಹೇಳಿದರು.

ಬಿಜೆಪಿಯವರಿಗೆ ಸುಳ್ಳೇ ಆಧಾರ. ಜಿಗಜಿಣಗಿಯವರು ಸುಳ್ಳು ಆಪಾದನೆ ಮಾಡುವುದರಲ್ಲಿ ನಿಸ್ಸೀಮರು. ಮಾಡಿರುವ ಕೆಲಸ ಹೇಳದೇ ವಾಮ ಮಾರ್ಗದಲ್ಲಿ ಚುನಾವಣೆ ಎದುರಿಸುತ್ತ ಬಂದಿದ್ದಾರೆ. ಹಾಗಾಗಿ ಸಮಾಜ ಒಟ್ಟಾಗಿ ಈ ಸಲ ಕಾಂಗ್ರೆಸ್‌ಗೆ ಬೆಂಬಲ ನೀಡಿ, ಜಿಲ್ಲೆಯ ಹಾಗೂ ಸಮುದಾಯದ ಕಾಳಜಿ ಮೆರೆಯಬೇಕು. ಇಲ್ಲಿ ನೆರೆದಿರುವ ಪಂಚಮಸಾಲಿ ಜನರ ಉತ್ಸಾಹ ನೋಡಿದರೆ ರಾಜು ಆಲಗೂರರು ಎರಡು ಲಕ್ಷ ಮತಗಳ ಅಂತರದಿಂದ ಗೆಲ್ಲಲಿದ್ದಾರೆ



ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಸಮುದಾಯದ ಪ್ರಮುಖ ಮುಖಂಡ ಎಂ.ಆರ್.ಪಾಟೀಲ ಪ್ರಾಸ್ತಾವಿಕ ಮಾತನಾಡಿ, ಬಹುಸಂಖ್ಯಾತ ಪಂಚಮಸಾಲಿ ಬಂಧುಗಳ ಚಿಂತನೆ ಮೇರೆಗೆ ಈ ಸಭೆ ಆಯೋಜಿಸಲಾಗಿದೆ. ಬಿಜೆಪಿ ಅಭ್ಯರ್ಥಿಗೆ ಉತ್ತರ ಕೊಡಲು ಪಂಚಮಸಾಲಿ ಸಮುದಾಯ ನಿರ್ಧರಿಸಿ ಒಗ್ಗಟ್ಟು ಪ್ರದರ್ಶಿಸಿದೆ. ಇಂಚಗೇ-ರಿಯ ಪವಿತ್ರ ಜಾಗದಲ್ಲಿ ನಾವು ಶ್ರೇಷ್ಠ ನಿರ್ಣಯ ಕೈಗೊಳ್ಳುತ್ತಿದ್ದೇವೆ. ಕಾಂಗ್ರೆಸ್ ಅಭ್ಯರ್ಥಿಗೆ ನಾವು ಸಂಪೂರ್ಣ ಬೆಂಬಲ ಘೋಷಿಸುತ್ತಿದ್ದೇವೆ ಎಂದರು.

ನಮ್ಮ ಸಮಾಜ ಎಲ್ಲರ ಜೊತೆ ಅವಿನಾಭಾವ ಸಂಬಂಧ ಹೊಂದಿದೆ. ನಾವು ಸರ್ವ ಜನಾಂಗದ ಹಿತ ಬಯಸಿದವರು. ಹಾಗಾಗಿ ಅಭಿವೃದ್ಧಿ, ಸರ್ವರ ಹಿತ ಬಯಸುವ ಕಾಂಗ್ರೆಸ್ ಪಕ್ಷಕ್ಕೆ ಬೆಂಬಲ ಸೂಚಿಸುತ್ತಿದ್ದೇವೆ. ಆಲಗೂರರು ನಮ್ಮ 2ಎ ಮೀಸಲಾತಿ ಹೋರಾಟದಲ್ಲಿ ತೊಡಗಿದ್ದರು. ಪಂಚಮಸಾಲಿ ಶ್ರೀಗಳನ್ನು ಕೂಡ ಭೇಟಿಯಾಗಿ ಅವರಿಂದ ಆಶೀರ್ವಾದ ಪಡೆದಿದ್ದಾರೆ. ಮೂಕನಾಗಿರುವ ಬಿಜೆಪಿ ಸಂಸದನಿಗಿಂತ ಕಾಂಗ್ರೆಸ್ ಅಭ್ಯರ್ಥಿ ಮೇಲು ಎಂದರು.

ಮುಖಂಡ ಸಂಗಮೇಶ ಬಬಲೇಶ್ವರ ಮಾತನಾಡಿ, ಜಿಗಜಿಣಗಿಯವರಿಂದ ಜನ ಬೇಸತ್ತಿದ್ದಾರೆ. ಇವರ ಹಠಾವೋ ಅಭಿಯಾನ ಇಲ್ಲಿಂದ ಶುರುವಾಗಿದೆ. ಪಂಚಮಸಾಲಿಗಳನ್ನು ಒಡೆದಾಳಿ ನಮ್ಮನ್ನು ತುಳಿದಿದ್ದಾರೆ. ನಮ್ಮ ಅಸ್ಮಿತೆಯನ್ನು ಅವರು ಕೆಣಕಿದ್ದಾರೆ. ಈ ಸಮುದಾಯವನ್ನು ಬಳಸಿ ಬಿಸಾಕಿದ್ದಾರೆ. ಬಸವ ತತ್ವದಲ್ಲಿ ನಂಬಿಕೆ ಹೊಂದಿರುವ ನಾವು ಆತ್ಮ ಗೌರವಕ್ಕಾಗಿ ಆಲಗೂರರಿಗೆ ಬೆಂಬಲ ಸೂಚಿಸಲೇಬೇಕಾಗಿದೆ. ಜಿಲ್ಲೆಗಾಗಿ ಒಂದು ಸಣ್ಣ ಕೆಲಸವೂ ಮಾಡದ ಜಿಗಜಿಣ-ಗಿಯವರನ್ನು ತಿರಸ್ಕರಿಸಬೇಕಿದೆ ಎಂದರು.

ಮಾತೆತ್ತಿದರೆ ಮೋದಿಗೆ ನೋಡಿ ಓಟು ಹಾಕಿರಿ ಎನ್ನುವ ಬಿಜೆಪಿ ಅಭ್ಯರ್ಥಿಗೆ ಯಾವ ನೈತಿಕತೆಯೂ ಇಲ್ಲ. ಆಲಗೂರರು ಚುನಾವಣೆಗೆ ಹೋಗುವ ಮುನ್ನ ಹತ್ತಂಶದ ಕಾರ್ಯಕ್ರಮ ಹಾಕಿಕೊಂಡು ತಾವು ಅಭಿವೃದ್ಧಿ ಪರ ಎನ್ನುವ ಕನಸು ಬಿತ್ತಿದ್ದಾರೆ. ಪ್ರವಾಸೋದ್ಯಮ, ಶಿಕ್ಷಣ, ರೈಲು, ವಿಮಾನಯಾನ, ಆಲಮಟ್ಟಿ ಅಣೆಕಟ್ಟು ಎತ್ತರ ಸೇರಿ ಅನೇಕ ಯೋಜನೆಗಳನ್ನು ಇವರು ಹಾಕಿಕೊಂಡಿದ್ದಾರೆ. ಒಂದಿನವೂ ಬಾಯಿ ತೆಗೆದು ಮಾತಾಡದ, ಉದಾಸೀನ ಹೊಂದಿರುವ ಜಿಗಜಿಣಗಿಯಂತವರು ನಮಗೆ ಯಾಕೆ ಬೇಕು. ಅವರನ್ನು ಯಾವ ಅಲೆಯೂ ಈ ಸಲ ಉಳಿಸಲ್ಲ ಎಂದರು.

ಲಿಂಗಾಯತ ಪಂಚಮಸಾಲಿ ಜನ ತಾಯಿ ಹೃದಯದವರು, ಜಾತ್ಯಾತೀತ ಗುಣವಿರುವ ನಾವು ಪ್ರಗತಿಪರ ವಿಚಾರವಿಟ್ಟುಕೊಂಡು ರಾಜಕಾರಣ ಮಾಡಿದವರು. ನಮ್ಮ ಹಿತ ಕಾಯುವ ಪಕ್ಷದ ಜೊತೆ ನಾವು ಹೋಗಬೇಕು ಎಂದು ಸೂಚ್ಯವಾಗಿ ಹೇಳಿದರು.

ಕಾಂಗ್ರೆಸ್ ಅಭ್ಯರ್ಥಿ ಪ್ರೊ.ರಾಜು ಆಲಗೂರ ಮಾತನಾಡಿ, ಬಿಜೆಪಿ ಅಭ್ಯರ್ಥಿ ರಮೇಶ ಜಿಗಜಿಣಗಿಯವರು ರಾಜಕಾರಣಕ್ಕಾಗಿ ಸಮುದಾಯವನ್ನು ಬಳಸಿಕೊಂಡಿದ್ದಾರೆ. ಹಲವು ಸಲ ಅವಕಾಶ ನೀಡಿದರೂ ಪ್ರಯೋಜನವಾಗದ ಅವರಿಂದ ಏನು ನಿರೀಕ್ಷಿಸಲು ಸಾಧ್ಯ ಎನ್ನುವುದು ತಾವು ಆತ್ಮಾವಲೋಕನ ಮಾಡಿಕೊಳ್ಳಬೇಕು. ಒಕ್ಕಲುತನವೇ ಆಧಾರವಾಗಿರುವ ಪಂಚಮಸಾಲಿ ಜನರ ಹಿತವನ್ನು ಅವರು ಕಾಪಾಡಲಿಲ್ಲ. ರೈತರಿಗೆ ಯೋಗ್ಯ ದರ, ಪರಿಹಾರ ನೀಡಲಿಲ್ಲ. ಜಿಲ್ಲೆಯ ತೋಟಗಾರಿಕೆಗೆ ಯಾವೊಂದು ಸಹಾಯ ಮಾಡಲಿಲ್ಲ ಎಂದರು.

ನೀವು ನನ್ನ ಮೇಲೆ ವಿಶ್ವಾಸವಿಟ್ಟರೆ ಅದಕ್ಕೆ ಧಕ್ಕೆಯಾಗದೇ ಪ್ರಾಮಾಣಿಕ ಸೇವಕನಾಗಿ ಇರುವೆ. ನಿಮ್ಮ ಭಾವನೆಗಳಿಗೆ ಚ್ಯುತಿ ಬಾರದಂತೆ ನಡೆದುಕೊಳ್ಳುವೆ ಎಂದು ಹೇಳಿದರು.

ಶಾಸಕ ವಿಠ್ಠಲ ಕಟಕದೊಂಡ ಮಾತನಾಡಿ, ವೀರ ರಾಣಿ ಕಿತ್ತೂರು ಚೆನ್ನಮ್ಮರ ವಂಶಸ್ಥರಾದ ನಿಮ್ಮಿಂದ ಈ ಚುನಾವಣೆಯಲ್ಲಿ ಬದಲಾವಣೆ ಸಾಧ್ಯವಿದೆ. ನಿಮ್ಮ ಸಮುದಾಯಕ್ಕೆ ಬೇಕಿರುವ ಮೀಸಲಾತಿಗೆ ನಾವು ಬದ್ಧರಾಗಿದ್ದೇವೆ. ನಿಮ್ಮ ಅಭಿವೃದ್ಧಿಗೆ ಶ್ರಮಿಸುತ್ತೇನೆ ಎಂದರು.

ವಿದ್ಯಾರಾಣಿ ತುಂಗಳ ಮಾತನಾಡಿ, ಚನ್ನಮ್ಮನ ವಂಶಸ್ಥರಾದ ನಾವು ಜಿಲ್ಲೆಯ ರಾಜಕಾರಣದ ದಿಕ್ಕನ್ನು ಬದಲಿಸುವ ಶಕ್ತಿ ಉಳ್ಳವರಾಗಿದ್ದೇವೆ. ಈ ಲೋಕಸಭೆ ಚುನಾವಣೆಯಲ್ಲಿ ನಾವು ಯೋಗ್ಯ ವ್ಯಕ್ತಿಯಾದ ಆಲಗೂರರಿಗೆ ಮತ ನೀಡಬೇಕು. ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ಮತದಾನದಲ್ಲಿ ಪಾಲ್ಗೊಳ್ಳಬೇಕು ಎಂದು ಕೋರಿದರು.


ಮುಖಂಡರಾದ ಈರಣ್ಣ ಪಟ್ಟಣಶೆಟ್ಟಿ, ಆರ್.ಜಿ. ಯರನಾಳ, ಚಂದ್ರಶೇಖರಗೌಡ ಪಾಟೀಲ, ಶ್ರೀಮಂತ್ ಇಂಡಿ ಹಂಗರಗಿ, ಮಹಾದೇವಿ ಗೋಕಾಕ, ವಿದ್ಯಾರಾಣಿ ತುಂಗಳ, ದಾನಮ್ಮ ಗೌಡತಿ ಪಾಟೀಲ, ತಮ್ಮನಗೌಡ ಪಾಟೀಲ್, ಚೆನ್ನಪ್ಪ ಕೊಪ್ಪದ, ಅಶೋಕಗೌಡ ಪಾಟೀಲ, ಅಮರೇಶ ಗೂಳಿ, ಬಿ.ಆರ್.ಕುರಡಿ, ರಾಜುಗೌಡ ಪೋಲಿಸ್ ಪಾಟೀಲ, ಹೊನಮಲ್ಲ ಸಾರವಾಡ, ಅಶೋಕ ಕೊಳಾರಿ, ಶೇಖರಗೌಡ ಪಾಟೀಲ ಮನಗೂಳಿ, ವಿ.ಎಸ್.ಪಾಟೀಲ ಬಬಲೇಶ್ವರ ಅನೇಕ-ರಿದ್ದರು.

ಕಾಂತುಗೌಡ ಸುರಗಿಹಳ್ಳಿ, ವಿಠ್ಠಲ ವಡಗಾಂವ ನಿರೂಪಿಸಿದರು.

ಇಂಡಿ, ಸಿಂದಗಿ, ಮುದ್ದೇಬಿಹಾಳ, ಚಡಚಣ, ಬಸವನ ಬಾಗೇವಾಡಿ ಸೇರಿ ಎಲ್ಲೆಡೆಯಿಂದ ಜನ ಬಂದಿದ್ದರು.

ಪಂಚಮಸಾಲಿಗಳು ತಾಯಿ ಹೃದಯದವರು. ನಾವು ಎಲ್ಲರೊಡಗೂಡಿ ಬಾಳುವ ರೈತಾಪಿ ಜನ. ಒಕ್ಕಲುತನ ನೆಚ್ಚಿಕೊಂಡಿರುವ ನಾವು, ನಮ್ಮ ನೆಮ್ಮದಿಯ ಬದುಕಿಗಾಗಿ ಕಾಂಗ್ರೆಸ್ ಬೆಂಬಲಿಸಬೇಕಿದೆ. ಬಿಜೆಪಿ ಯಾವತ್ತೂ ರೈತರನ್ನು ನಿಕೃಷ್ಟವಾಗಿ ನೋಡಿದೆ."

– ಸಂಗಮೇಶ ಬಬಲೇಶ್ವರ,
ಲಿಂಗಾಯತ ಪಂಚಮಸಾಲಿ ಮುಖಂಡರು



# ಕ್ಷೇತ್ರಾದ್ಯಂತ ಕಾಂಗ್ರೆಸ್ ಅಲೆ :ಸಂಪ್ರದಾ ಪಾಟೀಲ

ಉದಯರಶ್ಮಿ ನ್ಯೂಸ್



ಚಿಮ್ಮಡ: ಕ್ಷೇತ್ರದಾದ್ಯಂತ ಈ ಬಾರಿ ಗ್ರಾಮ, ಪಟ್ಟಣಗಳಲ್ಲಿ ಕಾಂಗ್ರೆಸ್ ಪರ ಅಲೆಯಿದ್ದು ಸಹೋದರಿ ಸಂಂ–ಯುಕ್ತಾ ಪಾಟೀಲ ಗೆಲುವು ನಿಶ್ಚಿತ ಎಂದು ಬಾಗಲಕೋಟ ಲೋಕಸಭಾ ಮತಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಸಂಯುಕ್ತಾ ಪಾಟೀಲ ಸಹೋದರಿ ಸಂಪ್ರದಾ ಪಾಟೀಲ ಹೇಳಿದರು.


ಗ್ರಾಮದಲ್ಲಿ ಪಾದಯಾತ್ರೆ ಮೂಲಕ ಮನೆ ಮನೆಗೆ ತೆರಳಿ ಮತಯಾಚನೆ ಮಾಡುತ್ತ ಸಾರ್ವಜನಿರನ್ನುದ್ದೇಶಿಸಿ ಮಾತನಾಡಿದ ಅವರು ಹಿಂದಿನ ಸಂಸದರು ಚುನಾವಣೆ ಸಂಧರ್ಬಗಳಲ್ಲಿ ಮಾತ್ರ ಕ್ಷೇತ್ರಕ್ಕೆ ಆಗಮಿಸುತ್ತಿರುವುದು ಹಾಗೂ ಬಿಜೇಪಿಯ ಒಡೆದು ಆಳುವ ನೀತಿ ಇಲ್ಲಿನ ಮತದಾರರಲ್ಲಿ ಬೇಸರ ತ–ರಿಸಿದೆ ಅಲ್ಲದೇ ಸಿದ್ದರಾಮಯ್ಯ ನೇತ್ರತ್ವದ ರಾಜ್ಯ ಸರಕಾರ ಜಾ–ರಿಗೊಳಿಸಿದ ಪಂಚ ಗ್ಯಾರಂಟಿಗಳು ಸಾರ್ವಜನಿಕರಲ್ಲಿ ಕಾಂಗ್ರೆಸ್ ಕುರಿತ ಭರವಸೆ ಮೂಡಿಸಿದೆ, ಇದರಿಂದ ಎಲ್ಲ ವರ್ಗಗಳ ಮತದಾರರು ಕಾಂಗ್ರೆಸ್ ನತ್ತ ಒಲವು ತೋರುತಿದ್ದು ಇದು ಕಾಂಗ್ರೆಸ್ ಪಕ್ಷಕ್ಕೆ ಸುಲಭ ಜಯ ತಂದು ಕೊಡಲಿದೆ ಎಂದರು.

ಶನಿವಾರ ರಾತ್ರಿ ಗ್ರಾಮದ ಪ್ರತೀ ವಾರ್ಡಗಳ ಮನೆ ಮನೆಗಳಿಗೆ ಭೇಟಿನೀಡಿ ಅಭ್ಯರ್ಥಿ ಸಂಯುಕ್ತಾ ಪಾಟೀಲ ಪರ ಸಹೋದರಿ ಸಂಪ್ರದಾ ಪಾಟೀಲ ಮತಯಾಚನೆ ನಡೆಸಿದರು.

ಗ್ರಾಮ ಘಟಕದ ಅಧ್ಯಕ್ಷ ಉಮೇಶ ಪೂಜಾರಿ, ಅಶೋಕ ಧಡೂತಿ, ಮಹಾಲಿಂಗ ಮಾಯಣ್ಣವರ, ಶಿವಪ್ಪಾ ನಾಗನೂರ, ಪ್ರವೀಣ ಪೂಜಾರಿ, ಅರೂಣ ಗಾಣಿಗೇರ, ಮಹಾಲಿಂಗ ಬಳಗಾರ, ಅಶೋಕ ನಾವಿ, ಪಿರಸಾಬ ನದಾಫ, ಗ್ರಾ.ಪಂ. ಸದಸ್ಯೆ ಶ್ರೀಮತಿ ಮೇಘಾ ಅರುಣ ಗಾಣಿಗೇರ, ಸೇರಿದಂತೆ ಹಲವಾರು ಜನ ಪ್ರಮುಖರು ಉಪಸ್ಥಿತರಿದ್ದರು.

# ಕನ್ನೂರಿನಲ್ಲಿ ವಿವಿಧ ಪಕ್ಷ ತೊರೆದು ಕಾಂಗ್ರೆಸ್ ಸೇರ್ಪಡೆ

ಉದಯರಶ್ಮಿ ನ್ಯೂಸ್



ವಿಜಯಪುರ: ನಾಗಠಾಣ ಮತಕ್ಷೇತ್ರದ ಕನ್ನೂರು ಗ್ರಾಮದಲ್ಲಿ ಭಾನುವಾರ ಜೆಡಿಎಸ್, ಬಿಜೆಪಿ, ಶಿವಸೇನಾ ಹಾಗೂ ಕೆಆರ್.ಎಸ್. ಪಕ್ಷಗಳ ಹಲವಾರು ಪ್ರಮುಖರು ಅಭ್ಯರ್ಥಿ ರಾಜು ಆಲಗೂರ್ ಅವರನ್ನು ಬೆಂಬಲಿಸಿ ಕಾಂಗ್ರೆಸ್ ಪಕ್ಷ ಸೇರಿದರು.

ಗ್ರಾಮದ ಸಾಯಬಣ್ಣ ಅಡಹಳ್ಳಿ, ಸತೀಶ ಪಾಟೀಲ, ಈರಪ್ಪ ಅಡಹಳ್ಳಿ, ಆನಂದ ಬೆಳುಂಡಗಿ, ಮಲ್ಲಿಕಾರ್ಜುನ ಬೆಳುಂಡಗಿ, ಸಂಜಯ ಬೆಳುಂಡಗಿ, ಸದು ಬೆಳುಂಡಗಿ, ಪ್ರವೀಣ ಬೆಳುಂಡಗಿ, ಪ್ರಮೋದ ಬೆಳುಂಡಗಿ, ಪುಟ್ಟುಗೌಡ ಪಾಟೀಲ, ಈರಣ್ಣ ಅಡಹಳ್ಳಿ, ಸಿದ್ದರಾಮ ಅಡಹಳ್ಳಿ, ಅಮಸಿದ್ಧ ಅಡಹಳ್ಳಿ, ಅಪ್ಪಾಸಾಹೇಬ ಬೆಳುಂಡಗಿ, ಸೋಮು ಬೆಳುಂಡಗಿ, ವಿಜಯಕುಮಾರ ಅಡಹಳ್ಳಿ, ಆನಂದ ಅಡಹಳ್ಳಿ, ಕಾರ್ತಿಕ ಮಾಳಿ, ಸೋಮು ಮೇತ್ರಿ ಅನೇಕರು ಕಾಂಗ್ರೆಸ್ ಸೇ–ರಿದರು.

ಸಭೆಯಲ್ಲಿ ಮಾತನಾಡಿದ ಪ್ರೊ.ರಾಜು ಆಲಗೂರರು, ಜೆಡಿ–ಎಸ್ ಹಾಗೂ ಬಿಜೆಪಿ ಜನ ವಿರೋಧಿಯಾಗಿವೆ. ಅವುಗಳು ಜನರಿಂದ ದೂರವಾಗಿದ್ದಕ್ಕೆ ನೀವೆಲ್ಲ ಕಾಂಗ್ರೆಸ್ ಸೇರಿದ್ದೇ ಸಾಕ್ಷಿ. ನನ್ನ ಮೇಲೆ ನೀವು ವಿಶ್ವಾಸ ಇಟ್ಟಿದ್ದಕ್ಕೆ ಪ್ರತಿಯಾಗಿ ಕ್ಷೇತ್ರದ ಅಭಿವೃದ್ಧಿಗೆ ಶ್ರಮಿಸುವೆ ಎಂದರು.

ಮುಖಂಡರಾದ ಡಿ.ಎಲ್. ಚವ್ಹಾಣ, ಜಗದೀಶ ಪಾಟೀಲ, ಚಂದ್ರಾಮ ಬೆಳುಂಡಗಿ, ಕಾಳಪ್ಪ ಬೆಳುಂಡಗಿ, ಈರಪ್ಪ ಬೆಳುಂಡಗಿ, ಬಾಳು ಜೀರಗಿಹಾಳ, ಲಾಲಪ್ಪ ಮಾದಾರ, ಶಿವಾನಂದ ಡೊಳ್ಳಿ, ರಮೇಶ ಪಾಟೀಲ, ಅಣ್ಣಪ್ಪ ಅವರಸಂಗ ಅನೇಕರಿದ್ದರು.

# ಕಾಂಗ್ರೆಸ್ ಬೆಂಬಲಿಸಲು ಸಮಗಾರ ಸಮಾಜದ ಮುಖಂಡರ ಮನವಿ

ಉದಯರಶ್ಮಿ ನ್ಯೂಸ್



ವಿಜಯಪುರ: ಲೋಕಸಭಾ ಚುನಾವಣೆಯಲ್ಲಿ ಸಮಗಾರ ಸಮಾಜವು ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯಾದ ರಾಜು ಆಲಗೂರ ರವರಿಗೆ ಮತ ಚಲಾಯಿಸಬೇಕೆಂದು ಜಿಲ್ಲೆಯ ಸಮಗಾರ ಸಮಾಜದ ಮುಖಂಡರು ಭಾನುವಾರ ಮನವಿ ಮಾಡಿದ್ದಾರೆ.

ಕಾಂಗ್ರೆಸ್ ಪಕ್ಷವು ದೀನ ದಲಿತರ ಹಾಗೂ ಬಡವರ ಪಕ್ಷವಾಗಿದ್ದು, ಈ ವರ್ಗಗಳಿಗಾಗಿ ಹಲವಾರು ಯೋಜನೆಗಳನ್ನು ಜಾರಿ ಮಾಡಿದೆ. ಇದರ ಲಾಭವನ್ನು ಸಮಗಾರ ಸಮಾಜ ಕೂಡ ಪಡೆದುಕೊಂಡಿದೆ. ಸ್ವಾತಂತ್ರ್ಯ ದೊರೆತಾಗ ಅತ್ಯಂತ ಹೀನಾಯ ಸ್ಥಿತಿಯಲ್ಲಿದ್ದ ಸಮಾಜವು ಕಾಂಗ್ರೆಸ್ ಪಕ್ಷವು ಜಾರಿಗೆ ತಂದ ಭೂಸುಧಾರಣೆ ಕಾಯ್ದೆ, ಉಳುವವನೇ ಭೂ ಒಡೆಯ ಇಂಥ ಯೋಜನೆಗಳ ಲಾಭ ಪಡೆದುಕೊಂಡಿದೆ. ಕಾಂಗ್ರೆಸ್ ಪಕ್ಷದ ಆಡಳಿತದ ಸಮಯದಲ್ಲಿ ಶಿಕ್ಷಣವನ್ನು ಪಡೆದು ಸರಕಾರಿ ಉದ್ಯೋಗಿಗಳಾಗಿ ಆ ಮೂಲಕ ಆರ್ಥಿಕವಾಗಿ ಮತ್ತು ಸಾಮಾಜಿಕವಾಗಿ ಸ್ಥಿತಿವಂತರಾಗಲು ಕಾರಣವಾಯಿತು. ಅನೇಕ ಯುವಕರು ಉನ್ನತ ಶಿಕ್ಷಣ ಪಡೆದು ದೊಡ್ಡ ದೊಡ್ಡ ಕಂಪನಿಗಳಲ್ಲೂ ಉದ್ಯೋಗಿಗಳಾಗಿ ಕೆಲವರು ವಿದೇಶಕ್ಕೂ ಕೂಡ ಹೋಗಿ ಉದ್ಯೋಗ ಮಾಡಲು ಕಾಂಗ್ರೆಸ್ ಪಕ್ಷವು ಕಾರಣವಾಗಿದೆ. ಇಷ್ಟೆಲ್ಲ ಪ್ರಯೋಜನಗಳನ್ನು ಪಡೆದ ಸಮಗಾರ ಸಮಾಜವು ಈಗ ಕಾಂಗ್ರೆಸ್ ಪಕ್ಷದ ಋಣ ತೀರಿಸುವ ಸಮಯ ಬಂದಿದ್ದು, ಎಲ್ಲರೂ ಒಗ್ಗಟ್ಟಿನಿಂದ ಕಾಂಗ್ರೆಸ್ ಪಕ್ಷವನ್ನು ಸಂಪೂರ್ಣವಾಗಿ ಬೆಂಬಲಿಸಬೇಕು. ಹಲವಾರು ವರ್ಷಗಳಿಂದ ನಮ್ಮ ಸಮಗಾರ ಸಮಾಜದ ಅಭಿವೃದ್ಧಿಯನ್ನು ಬಿಜೆಪಿ ಪಕ್ಷವು ಸಂಪೂರ್ಣವಾಗಿ ನಿರ್ಲಕ್ಷಿಸಿದೆ. ಅಲ್ಲದೆ ಯಾವುದೇ ಕ್ಷೇತ್ರದಲ್ಲಿ ನಮಗೆ ಸಿಗಬೇಕಾದ ಸಂವಿಧಾನಬದ್ಧ ಹಕ್ಕುಗಳನ್ನು ನೀಡದೆ ನಮಗೆ ಅನ್ಯಾಯ ಮಾಡಿದೆ. ಕಾಂಗ್ರೆಸ್ ಪಕ್ಷದ ಪ್ರಣಾಳಿಕೆ, ಯೋಜನೆಗಳು, ಸೌಲತ್ತುಗಳನ್ನು ಹಾಗೂ ಹಕ್ಕುಗಳನ್ನು ಮುಂಬರುವ ದಿನಗಳಲ್ಲಿ ಕಾಂಗ್ರೆಸ್ ಪಕ್ಷವು ನಮಗೆ ದೊರಕಿಸಿಕೊಟ್ಟು ಸಮಾಜದ ಸರ್ವಾಂಗೀಣ ಅಭಿವೃದ್ಧಿಗೆ ಶ್ರಮಿಸುವ ವಿಶ್ವಾಸವಿದೆ. ಆದ್ದರಿಂದ ಬಿಜೆಪಿ–ಜೆಡಿಎಸ್ ಮೈತ್ರಿ ಪಕ್ಷವನ್ನು ತಿರಸ್ಕರಿಸಿ ಕಾಂಗ್ರೆಸ್ ಪಕ್ಷದ ಸುಸಂಸ್ಕೃತ, ವಿದ್ಯಾವಂತ ಹಾಗೂ ಸಂಭಾವಿತ ಅಭ್ಯರ್ಥಿಯಾದ ಪ್ರೊ. ಎಚ್.ಆರ್. ಆಲಗೂರ ರವರನ್ನು ಸಂಪೂರ್ಣವಾಗಿ ಬೆಂಬಲಿಸಲು ಸಮಾಜದ ಮುಖಂಡರುಗಳಾದ ವಸಂತ ಹೊನಮೊಡೆ, ಮಾಜಿ ಜಿ.ಪಂ. ಸದಸ್ಯ ದಾನಪ್ಪ ಕಟ್ಟಿಮನಿ, ಪರಶುರಾಮ ಹೊಡಮನಿ, ಲಕ್ಷ್ಮಣ ಇಲಕಲ್, ಸಂತೋಷ ಬಾಲಗಾಂವಿ, ರಮೇಶ ಹೊನಮೊರೆ, ಸಂತೋಷ ಜೋಗಿ, ಸಂತೋಷ ಕಾಂಬಳೆ, ಜಗದೀಶ ಕಬಾಡೆ, ಸಂಜು ಕಾಂಬಳೆ ಮುಂತಾದವರು ಜಂಟಿ ಪತ್ರಿಕಾ ಹೇಳಿಕೆ ನೀಡಿದ್ದಾರೆ.

# ಸ್ವಾರ್ಥಕ್ಕಾಗಿ ಸಮಾಜದ ಬಳಕೆ ಸಲ್ಲದು :ಪಾಟೀಲ

ಉದಯರಶ್ಮಿ ನ್ಯೂಸ್



ಸಿಂದಗಿ: ಪಂಚಮಸಾಲಿ ಸಮಾಜಕ್ಕೆ 2ಎ ಮೀಸಲಾತಿ ಕೊಡಿಸುವ ಸಲುವಾಗಿ ಜಯಬಸವ ಮೃತ್ಯುಂಜ ಸ್ವಾಮೀಜಿ ಸತತವಾಗಿ ಹೋರಾಟ ಮಾಡುತ್ತಲೇ ಬಂದಿದ್ದಾರೆ. ಅದಕ್ಕೇ ಕಾಂಗ್ರೆಸ್ ನಾಯಕರ ಕೊಡುಗೆ ಏನು ಎಂಬುದು ಸಮಾಜದ ಮುಖಂಡ, ಬಿಜೆಪಿ ಮಂಡಲ ತಾಲೂಕಾಧ್ಯಕ್ಷ ಸಂತೋಷ ಪಾಟೀಲ ಡಂಬಳ ಪ್ರಶ್ನಿಸಿದರು.

ಭಾನುವಾರದಂದು ಪಟ್ಟಣದ ಬಿಜೆಪಿ ಕಾರ್ಯಾಲಯದಲ್ಲಿ ಪಂಚಮಸಾಲಿ ಸಮಾಜದ ವತಿಯಿಂದ ಹಮ್ಮಿಕೊಂಡ ಪತ್ರಿಕಾಗೋಷ್ಠಿಯಲ್ಲಿ ಸಮಾಜದ ಮುಖಂಡ, ಬಿಜೆಪಿ ಮಂಡಲ ತಾಲೂಕಾಧ್ಯಕ್ಷ ಸಂತೋಷ ಪಾಟೀಲ ಡಂಬಳ ಮಾತನಾಡಿ, ಪ್ರತಿಯೊಂದು ಪಕ್ಷದಲ್ಲಿ ಎಲ್ಲ ಸಮಾಜದ ನಾಯಕ–ರಿರುವುದು ಸಹಜ. ಆದರೆ ಇಡೀ ಪಂಚಮಸಾಲಿ ಸಮಾಜ ಕಾಂಗ್ರೆಸ್ ಪಕ್ಷಕ್ಕೆ ಬೆಂಬಲಿಸಿದೆ ಎನ್ನುವುದು ಖಂಡನೀಯ. ಪಂಚಮಸಾಲಿ ಸಮಾಜಕ್ಕೆ 2ಎ ಮೀಸಲಾತಿ ಕೊಡಿಸುವ ಸಲುವಾಗಿ ಜಯ ಬಸವ ಮೃತ್ಯುಂಜ ಸ್ವಾಮೀಜಿ ಸತತವಾಗಿ ಹೋರಾಟ ಮಾಡುತ್ತಲೇ ಬಂದಿದ್ದಾರೆ. ಅದಕ್ಕೇ ಕಾಂಗ್ರೆಸ್ ನಾಯಕರ ಕೊಡುಗೆ ಏನು ಎಂದು ಪ್ರಶ್ನಿಸಿದರು. ಬಸನಗೌಡ ಪಾಟೀಲ ಯತ್ನಾಳ ಅವರು ಸಮಾಜದ ಉದ್ದಾರಕ್ಕಾಗಿ ಸರಕಾರದ ಪ್ರತಿನಿಧಿಯಾಗಿದ್ದರೂ ಹೋರಾಡಿದ್ದಾರೆ.

ಈ ವೇಳೆ ಅಶೋಕ ಅಲ್ಲಾಪೂರ, ಸಿದ್ದರಾಮ ಪಾಟೀಲ, ಜೆಡಿಎಸ್ ತಾಲೂಕಾಧ್ಯಕ್ಷ ಎಮ್. ಎನ್.ಪಾಟೀಲ ಮಾತನಾಡಿ, ಇತ್ತಿಚಗೆ ಹಿಂಚಗೇರಿಯಲ್ಲಿ ನಡೆದ ಸಮಾಜದ ಸಮಾವೇಶದಲ್ಲಿ ಸಮಾಜ ಬಾಂಧವರ ಜನಸಂಖ್ಯೆ ಕಡಿಮೆ ಇತ್ತು. ಕಾಂಗ್ರೆಸ್ ಹೇಳಿಕೆಯಿಂದ ಸಮಾಜದ ಭಾವನೆಗಳನ್ನು ವ್ಯಕ್ತಪಡಿಸುವ ಸ್ವಾತಂತ್ರ್ಯವಿಲ್ಲದೇ ಸ್ವಾರ್ಥಕ್ಕಾಗಿ ಸಮಾಜ ಬಳಕೆ ಸಲ್ಲದು. ಸಮಾಜದ ನಾಯಕರನ್ನು ಹಾಗೂ ಮತದಾರರನ್ನು ಗೊಂದಲಕ್ಕೀಡು ಮಾಡುವುದು ಸಲ್ಲದು. ಸಮಾಜವನ್ನು ವ್ಯಕ್ತಿಗಳನ್ನು ತುಳಿಯುವ ಕೆಲಸ ಜಿಗಜಿಣಗಿ ಮಾಡಿಲ್ಲ. ಹಾಗಾಗಿ ಮತದಾರರು ಈ ಬಾರಿ ಜಿಗಜಿಣಗಿ ಅವರನ್ನು ಗೆಲ್ಲಿಸಿ ಹಾಗೂ ಮೋದಿಯವರನ್ನು ಮತ್ತೊಮ್ಮೆ ಪ್ರಧಾನಯಾಗಲಿ ಎಂದು ಮನವಿ ಮಾಡಿಕೊಂಡರು.

ಈ ವೇಳೆ ಜೆಡಿಎಸ್ ತಾಲೂಕಾಧ್ಯಕ್ಷ ಎಮ್.ಎನ್.ಪಾಟೀಲ ಮಾತನಾಡಿ, ಕಾಂಗ್ರೆಸ್‌ನಿಂದ ಒಬ್ಬರಾದರೂ ಸಮಾಜದ ವ್ಯಕ್ತಿ ಸಿಎಂ ಆಗಿದ್ದಾರೆಯೇ. ಕಾಂಗ್ರೆಸ್ ಯಾಕೆ ಮಾಡಲಿಲ್ಲ. ಸಮಾಜಕ್ಕೆ ಕಾಂಗ್ರೆಸ್ ಪಕ್ಷದಿಂದ ಅನ್ಯಾಯವಾಗಿದೆ. ಬಿಜೆಪಿ ಸಮಾಜವನ್ನು ಎತ್ತಿ ಹಿಡದಿದೆ ಎಂದರು.

ಶ್ರೀಶೈಲ ಚಳ್ಳಗಿ, ಮಹಾಂತಗೌಡ ಬಿರಾದಾರ, ಗುಂಡು ಕೆರೂಡಿ, ಮಲ್ಲು ಬಗಲಿ, ಶಿವರಾಜ ಕೆಂಗನಾಳ, ಸಂಗಮೇಶ ಮನ್ನಿಕೇರಿ, ಮಹೇಶ ಪಾಟೀಲ, ಮವೀನ ಪೀರಶೆಟ್ಟಿ, ಪ್ರಮೋದ ಬಾಗೇವಾಡ, ರಮೇಶ ಪೀರಶೆಟ್ಟಿ, ಗಂಗಾಧರ ಕಡಗಂಚಿ, ಗುರು ತಳವಾರ, ಎನ್. ಎಸ್.ಹಿರೇಮಠ, ಪೀರು ಕೆರೂರ ಸಾವಿತ್ರಿ ಹಿಕ್ಕಣಗುತ್ತಿ ಸೇರಿದಂತೆ ಅನೇಕರಿದ್ದರು.

# ರಸ್ತೆ ಕಾಮಗಾರಿಗಾಗಿ ಮರಗಳ ಮಾರಣಹೋಮ :ಸಾರ್ವಜನಿಕರ ಅಸಮಾಧಾನ

ಉದಯರಶ್ಮಿ ನ್ಯೂಸ್

ದೇವರಹಿಪ್ಪರಗಿ: ಅಭಿವೃದ್ಧಿಯ ಹೆಸರಲ್ಲಿ ರಸ್ತೆ ಕಾಮಗಾರಿಗಾಗಿ ಎಡ ಬಲಗಳಲ್ಲಿಯ ಮರಗಳ ಮಾರಣಹೋಮ ನಡೆಯುತ್ತಿದ್ದರೂ ಕಂಡು ಕಾಣದಂತಿರುವ ಅರಣ್ಯ ಇಲಾಖೆಯ ಕುರಿತು ಸಾರ್ವಜನಿಕರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಪಟ್ಟಣದ ಇಂಡಿ ರಸ್ತೆಯಲ್ಲಿ ದ್ವಿಪಥ ರಸ್ತೆಗಾಗಿ ಕಾಮಗಾರಿ ಆರಂಭಿಸಲಾಗಿದ್ದು, ರಸ್ತೆ ಬದಿಯ ಚರಂಡಿ ನಿರ್ಮಾಣ–ಕ್ಕಾಗಿ ಅಂಬೇಡ್ಕರ್ ವೃತ್ತದಿಂದ ಕೆಇಬಿವರೆಗಿನ ಎಡಬಲಗಳಲ್ಲಿನ ಹತ್ತು ವರ್ಷಗಳ ಹಿಂದೆ ನೆಟ್ಟ 100 ಕ್ಕೂ ಹೆಚ್ಚು ಮರಗಳನ್ನು ಬೇರು ಸಮೇತ ಕಿತ್ತುಹಾಕಲಾಗಿದೆ. ಸಾಮಾನ್ಯವಾಗಿ ಅಭಿವೃದ್ಧಿ ಕಾರ್ಯಗಳಿಗೆ ಮರಗಳ ತೆರವು ಕಾರ್ಯಕ್ಕೆ ಅರಣ್ಯ



ಇಲಾಖೆಯ ಅನುಮತಿ ಬೇಕು. ಆದರೆ ಇಲ್ಲಿ ಅರಣ್ಯ ಇಲಾಖೆಯ ಗಮನ ತಂದು ಮರಗಳನ್ನು ಕಡಿತಗೊಳಿಸಲಾಗಿದೆಯೋ ಹೇಗೆ ಎಂಬುದರ ಕುರಿತು ಮಾಹಿತಿಯಿಲ್ಲ.

ಒಂದೆಡೆ ದಿನದಿಂದ ದಿನಕ್ಕೆ ಕಾಡು ಬೆಳೆಸಿ, ನಾಡು ಉಳಿಸಿ, ಮನೆಗೊಂದು ಮರ ಬೆಳೆಸಿ ಎಂಬ ಘೋಷಣೆಗಳೊಂದಿಗೆ ಪರಿಸರ ಉಳಿವಿಗಾಗಿ ಜಾಗೃತಿ ಮೂಡಿಸಲಾಗುತ್ತಿದ್ದರೇ, ಇಲ್ಲಿ ಮಾತ್ರ ಮರಗಳ ಜಾಗೃತಿ ಬದಲು ದುರ್ಗತಿ ಎನ್ನುವಂತಾಗಿದೆ. ತಾಪಮಾನದ ಹೆಚ್ಚಳ, ಆಮ್ಲಜನಕದ ಕುಸಿತ, ಬಿಸಿಗಾಳಿ ಬಿಸುವಿಕೆ, ಮಳೆಪ್ರಮಾಣದಲ್ಲಿ ಇಳಿಕೆಯಂತ ಎಚ್ಚರಿಕೆಗಳ ನಡುವೆಯೂ ಪಟ್ಟಣದ ಮರಗಳನ್ನು ಬೇಕಾಬಿಟ್ಟಿಯಾಗಿ ಕಡಿಯುತ್ತಿರುವುದು ಅತ್ಯಂತ ನಿರ್ಲಕ್ಷ ◻◻ ನಡೆ. ಒಂದು ಸಸಿಗೆ ನೀರುಣಿಸಿ ಮರವಾಗಿ ಬೆಳೆಸುವುದರ ಹಿಂದಿನ ಶ್ರಮ ಎಂಥದ್ದು ಎಂಬುವುದು ಕೇವಲ ಮರಗಳನ್ನು ನೆಟ್ಟು ಬೆಳೆಸಿದವರಿಗೆ ಗೊತ್ತು. ಆದರೆ ಈಗ ನಿಷ್ಕರುಣೆಯಿಂದ ಅಗತ್ಯಕ್ಕಿಂತ ಹೆಚ್ಚಾಗಿ ಮರಗಳನ್ನು ಕತ್ತರಿಸಿರುವುದು ಅಕ್ಷರಶ ತಪ್ಪು. ಆದ್ದರಿಂದ ಕೂಡಲೇ ರಸ್ತೆ, ಚರಂಡಿ ನಿರ್ಮಾಣದ ನಂತರ ಅಂಬೇಡ್ಕರ್ ವೃತ್ತದಿಂದ ರಾಣಿ ಚನ್ನಮ್ಮ ವೃತ್ತದವರೆಗೆ ಎಡಬಲಗಳಲ್ಲಿ ನೂರಕ್ಕೂ ಅಧಿಕ ಸಸಿಗಳನ್ನು ನೆಡಲು ಕ್ರಮ ವಹಿಸಬೇಕು. ಜೊತೆಗೆ ಮುಖ್ಯವಾಗಿ ಹೆಸ್ಕಾಂಇಲಾಖೆ ಅನಗತ್ಯವಾಗಿ ಗಿಡ ಮರಗಳಿಗೆ ಕೊಡಲಿಯೇಟು ಹಾಕದಂತೆ ಸೂಕ್ತ ನಿರ್ದೇಶನ ನೀಡಬೇಕು ಎಂದು ಪಟ್ಟಣ ಪಂಚಾಯಿತಿ ಸದಸ್ಯ ರಮೇಶ ಮಸಬಿನಾಳ, ತಾಲ್ಲೂಕು ಜಂಗಮಾಭಿವೃದ್ಧಿ ಸಂಘದ ಅಧ್ಯಕ್ಷ ಸೋಮಶೇಖರ ಹಿರೇಮಠ, ನಾಗೇಂದ್ರ ಇಂಡಿ, ನಜೀರ್ ಕಲಕೇರಿ, ಸೋಮು ಸೊನ್ನದ ಸೇರಿದಂತೆ ಹಲವು ಪರಿಸರ ಪ್ರೇಯರ ಆಗ್ರಹವಾಗಿದೆ.

# ನಿಯಂತ್ರಕರೇ ಇಲ್ಲದ ಬಸ್ ನಿಲ್ದಾಣ :ಪ್ರಯಾಣಿಕರ ಪರದಾಟ

ಉದಯರಶ್ಮಿ ನ್ಯೂಸ್

ದೇವರಹಿಪ್ಪರಗಿ: ನೂತನವಾಗಿ ನಿರ್ಮಾಣಗೊಂಡ ಬಸ್ ನಿಲ್ದಾಣದಲ್ಲಿ ಸಾರಿಗೆ ನಿಯಂತ್ರಕರಿಲ್ಲದೇ ಕೊಠಡಿ ಬಿಕೋ ಎನ್ನುವಂತಿದ್ದು, ವಿವಿಧೆಡೆ ತೆರಳುವ ಬಸ್‌ಗಳ ಮಾಹಿತಿ ತಿಳಿಯಲು ಪ್ರಯಾಣಿಕರು ಪರದಾಡುವಂತಾಗಿದೆ.

ಪಟ್ಟಣ ಹಾಗೂ ತಾಲ್ಲೂಕು ಕೇಂದ್ರ ಸ್ಥಳದ ಬಸ್ ನಿಲ್ದಾಣ ನೂತನವಾಗಿ ನಿರ್ಮಾಣಗೊಂಡು ಕಂಗೊಳಿಸುತ್ತಿದೆ. ಆದರೆ ಅಗತ್ಯವಾದ ಸಿಬ್ಬಂದಿಗಳಿಲ್ಲದೇ ಬಣಗುಡುತ್ತಿದೆ. ಮುಖ್ಯವಾಗಿ ಬಸ್ ನಿಲ್ದಾಣದಲ್ಲಿ ಕಳೆದ ಎರಡು ದಿನಗಳಿಂದ ಸಾರಿಗೆ ನಿಯಂತ್ರಕರು ಇಲ್ಲದೇ ಇದ್ದು, ಕೊಠಡಿಯನ್ನು ಮುಚ್ಚಲಾಗಿದೆ. ಇದರಿಂದ ಬಸ್‌ಗಳ ಮಾಹಿತಿ ತಿಳಿಯಲು ಪ್ರಯಾಣಿಕರು ಪರದಾಡಿ ಇತರರನ್ನು ಕೇಳುವಂತಾಗಿದೆ.

ಸ್ಥಳೀಯ ಬಸ್ ನಿಲ್ದಾಣ–ಕ್ಕೆ ಕನಿಷ್ಠ ಇಬ್ಬರು ಸಾರಿಗೆ ನಿಯಂತ್ರಕರ ಅಗತ್ಯತೆಯಿದೆ. ಆದ–ರೆ ಇಲಿ ಕೇವಲ ಒಬ್ಬರು ಮಾತ್ರ



ಕಾರ್ಯನಿರ್ವಹಿಸುತ್ತಿದ್ದು ಅವರು ಸಹ ಕೆಲಸದ ಒತ್ತಡ ಹಾಗೂ ವೈಯಕ್ತಿಕ ಕಾರಣಗಳಿಗಾಗಿ ರಜೆ ಪಡೆದಿದ್ದು ಪ್ರಯಾಣಿಕರಿಗೆ ಮಾಹಿತಿ–ದಾರರು ಇಲ್ಲದಂತಾಗಿದೆ. ಬಸ್ ನಿಲ್ದಾಣದ ಕ್ಷೇತ್ರ ಹಾಗೂ ಕಾರ್ಯಕ್ಕೆ ಅನುಗುಣವಾಗಿ ಪ್ರಸ್ತುತ ಇಬ್ಬರು ಸಾರಿಗೆ ನಿಯಂತ್ರಕರು ಹಾಗೂ ಒಬ್ಬರು ಭದ್ರತಾ ಸಿಬ್ಬಂದಿಯ ಅಗತ್ಯತೆಯಿದ್ದು ಕೂಡಲೇ ಇವರನ್ನು ನೇಮಿಸಿ ಪ್ರಯಾಣಿಕರಿಗೆ ಅನುಕೂಲ ಕಲ್ಪಿಸಬೇಕು.

ತಾಲ್ಲೂಕು ಕೇಂದ್ರದ ಬಸ್ ನಿಲಾಣಕ್ಕೆ ಸಿಬ್ಬಂದಿ ಅದರಲ್ಲೂ ಮುಖ್ಯವಾಗಿ ನಿಯಂತ್ರಕರು ಇರಲೇಬೇಕು ಆಗ ಮಾತ್ರ ನಮ್ಮಂಥ ಗ್ರಾಮಸ್ಥರಿಗೆ ಅನುಕೂಲವಾಗಲಿದೆ ಎಂದು ಹೆಚ್ಚುವರಿ ನಿಯಂತ್ರಕರ ಬೇಡಿಕೆಗೆ ಆಗ್ರಹಪಡಿಸುತ್ತಾರೆ ಕೋರವಾರ ಗ್ರಾಮದ ಮಂಜುನಾಥ ಕಾಮನಕೇರಿ, ರಾಯಗೊಂಡ ಯರನಾಳ (ಯಂಭತ್ನಾಳ), ಲಕ್ಷ್ಮಿ ಸಜ್ಜನ(ದೇವೂರ), ಎಂ.ಜಿ .ಹಿರೇಮಠ(ಕರಭಂಟನಾಳ),ಚನ್ನಪ್ಪ ಕಾರಜೋಳ (ನಿವಾಳಖೇಡ) ಹಾಗೂ ಪ್ರಕಾಶ ಡೋಣೂರಮಠ (ಸಾತಿಹಾಳ).

# ರಮೇಶ ಮಸಬಿನಾಳ ನೇತೃತ್ವದಲ್ಲಿ ಜಿಗಜಿಣಗಿ ಪರ ಪ್ರಚಾರ

ಉದಯರಶ್ಮಿ ನ್ಯೂಸ್



ದೇವರಹಿಪ್ಪರಗಿ: 10 ವರ್ಷಗಳ ಕಾಲ ಭ್ರಷ್ಟಾಚಾರ ರಹಿತ ಆಡಳಿತ ನೀಡಿದ ಮೋದಿಯವರನ್ನು ಮತ್ತೇ ಪ್ರಧಾನಿಯನ್ನಾಗಿ ಮಾಡೋಣ. ಅದಕ್ಕಾಗಿ ಬಿಜೆಪಿ ಅಭ್ಯರ್ಥಿ ರಮೇಶ ಜಿಗಜಿಣಗಿ ಅವರಿಗೆ ಮತ ನೀಡಿ ಎಂದು ಜಿಲ್ಲಾ ಕಾರ್ಯದರ್ಶಿ ರಮೇಶ ಮಸಬಿನಾಳ ಹೇಳಿದರು.

ಪಟ್ಟಣದ ಹೊಸನಗರದಲ್ಲಿ ಶನಿವಾರ ಸಾಯಂಕಾಲ ಲೋಕಸಭಾ ಅಭ್ಯರ್ಥಿ ರಮೇಶ ಜಿಗಜಿಣಗಿ ಪರ ಪ್ರಚಾರದ ನೇತೃತ್ವ ವಹಿಸಿ ಮಾತನಾಡಿದರು. ಪ್ರಧಾನಿ ಮೋದಿಯವರ ಹತ್ತು ವರ್ಷದ ಆಡಳಿತದಲ್ಲಿ ಇಡೀ ಜಗತ್ತೇ ಭಾರತದತ್ತ ನೋಡುವಂತಾಯಿತು. ಮೇಕ್ ಇಂಡಿಯಾ ಹಾಗೂ ಕರೋನಾ ಲಸಿಕೆ ಮೂಲಕ ಭಾರತದ ತಂತ್ರಜ್ಞಾನ ಹಾಗೂ ವೈದ್ಯಕೀಯ ನೆರವನ್ನು ಜಗತ್ತಿನ ವಿವಿಧ ದೇಶಗಳಿಗೆ ನೀಡಲಾಯಿತು. ಇಂಥ ಸಾಧನೆಗೆ ಕಾರಣರಾದ ವ್ಯಕ್ತಿ ಮೂರನೆಯ ಬಾರಿಗೆ ಪ್ರಧಾನಿ ಹುದ್ದೆಯಲ್ಲಿ ಇರುವುದು ನಮಗೆಲ್ಲರಿಗೂ ಹೆಮ್ಮೆಯ ವಿಷಯ. ಇನ್ನೂ ರಮೇಶ ಜಿಗಜಿಣಗಿ ಅವರು ಸಹ ಒಂದು ಲಕ್ಷ ಕೋಟಿ ಅನುದಾನದ ಮೂಲಕ ಜಿಲ್ಲೆಯ ಅಭಿವೃದ್ಧಿಗೆ ಶ್ರಮಿಸಿದ್ದಾರೆ. ಇವರ ಆಯ್ಕೆ ಮೂಲಕ ಪ್ರಧಾನಿಯವರ ಕೈ ಬಲಪಡಿಸೋಣ ಎಂದರು.

ಸುರೇಶ ಒಂಟೆತ್ತಿನ, ಸಲಬಯ್ಯ ಸದಯ್ಯನಮಠ, ಪ್ರವೀಣ ನಾಯ್ಕೋಡಿ, ಕುಮಾರ ಒಂಟೆತ್ತಿನ, ಮಹಾಂತೇಶ ಬಿರಾದಾರ, ಅಂಬರೀಷ ಒಂಟೆತ್ತಿನ, ಕುಮಾರ ದೇವಣಗಾಂವ, ಸಂತೋಷ ಹೀರಾಪುರ, ಮುತ್ತು ಜಾಲಗಾರ, ಬಸವರಾಜ ಒಂಟೆತ್ತಿನ, ಸಂಗು ಮಸಬಿನಾಳ ಇದ್ದರು.

# ಗಾಣಿಗರನ್ನು ಮೂಲೆ ಗುಂಪು ಮಾಡಿದ್ದೆ ಬಿಜೆಪಿ ಸಾಧನೆ :ಮಳಲಿ

ಉದಯರಶ್ಮಿ ನ್ಯೂಸ್

ಸಿಂದಗಿ: ಕಾಂಗ್ರೆಸ್ ಪಕ್ಷದ ಕೊಡುಗೆ ಸಮಾಜಕ್ಕೆ ಅನನ್ಯವಾಗಿದೆ. ಸವದಿ ಅವರಿಗೆ ಟಿಕೆಟ್ ತಪ್ಪಿಸಿದ್ದು ಜಿಗಜಿಣಗಿ ಎಂದು ಸಮಾಜದ ಮುಖಂಡ, ಕಾಂಗ್ರೆಸ್ ಪಕ್ಷದ ಸದಸ್ಯ ಸುರೇಶ ಮಳಲಿ ಎಂದು ಹೇಳಿದರು.

ಭಾನುವಾರ ಸಾಯಂಕಾಲ ಪಟ್ಟಣದ ಬ್ಲಾಕ್ ಕಾಂಗ್ರೆಸ್ ಕಾರ್ಯಾಲಯದಲ್ಲಿ ಗಾಣಿಗ ಸಮಾಜದ ವತಿಯಿಂದ ಹಮ್ಮಿಕೊಂಡ ಪತ್ರಿಕಾಗೋಷ್ಠಿಯಲ್ಲಿ ಸಮಾಜದ ಮುಖಂಡ ಸುರೇಶ ಮಳಲಿ ಮಾತನಾಡಿ, ಗಾಣಿಗ ಸಮುದಾಯಕ್ಕೆ 2ಎ ಮೀಸಲಾತಿ ನೀಡಿದ್ದು ಆಗಿನ ಕಾಂಗ್ರೆಸ್ ಸರಕಾರ ಮತ್ತು ವಿರಪ್ಪ ಮೋಯ್ಲಿ ಅವರ ಸರಕಾರ ಕಾಂಗ್ರೆಸ್ ಕೊಡುಗೆ ಸಮಾಜಕ್ಕೆ ಅನನ್ಯ. ಗಾಣಿಗ ಸಮಾಜವನ್ನು ಜಿಗಜಿಣಗಿ ಅವರು ಆಯ್ಕೆ ಮತ್ತು ಅಧಿಕಾರಕ್ಕೆ ಮಾತ್ರ ಬಳಸಿಕೊಂಡಿದ್ದಾರೆ. ಗಾಣಿಗ ಸಮುದಾಯವನ್ನು ಮೂಲೆ ಗುಂಪು ಮಾಡಿದ್ದೆ ಬಿಜೆಪಿಯವರ ಸಾಧನೆ. ಪಕ್ಷದಿಂದ ಸವದಿ ಅವರು ಹೊರ ಬರಲು ಜಿಗಜಿಣಗಿ ಅವರ ಹಿನ್ನಲೆ ಸಹಕಾರವಿದೆ. ಕಾರಣ ಸಮಾಜ ಬಾಂಧವರು ಕಾಂಗ್ರೆಸ್ ಪಕ್ಷದ ಆಲಗೂರ ಅವರಿಗೆ ಮತ ನೀಡಿ ಬೆಂಲಿಸಿ ಎಂದರು.

ಈ ವೇಳೆ ಗೋಲ್ಲಾಳಪ್ಪಗೌಡ ಪಾಟೀಲ ಮಾತನಾಡಿ, ಜಿಲ್ಲೆಗೆ ಜಿಗಜಿಣಗಿ ಅವರು ಕೊಡುಗೆ ಶೂನ್ಯ. ಮಂಜುರಾದ ಆಲಮೇಲ ತೋಟಗಾರಿಕಾ ಕಾಲೇಜ ರದ್ದಾಗುವಂತೆ ಮಾಡಿದ್ದು, ಸರಕಾರಿ ವೈಧ್ಯಕೀಯ ಕಾಲೇಜು ಮಾಡದೇ ಇರುವುದು ನೋಡಿದರೇ ಅವರ ಯಾವುದೇ ಅಭಿವೃದ್ಧಿ ಕಾರ್ಯ ಮಾಡಿಲ್ಲ ಎಂದರು.

ಇದೇ ಸಂದರ್ಭದಲ್ಲಿ ಕೆಡಿಪಿ ಸದಸ್ಯ ಸುರೇಶ ಚೌಧರಿ ಮಾತನಾಡಿ, ಕಳೆದ 15 ವರ್ಷದಿಂದ ಸಮುದಾಯಕ್ಕೆ ಜಿಗಜಿಣಗಿ ಅವರು ಯಾವುದೇ ಅನುದಾನ ನೀಡಿಲ್ಲ. ಕಾಂಗ್ರೆಸ್ ಸರಕಾರ ಸಿಂದಗಿಯ ವನಶ್ರೀ ಸಮುದಾಯ ಭವನಕ್ಕೆ 2ಕೋಟಿ, ಇಂಡಿ ಸಮುದಾಯ ಭವನಕ್ಕೆ 5ಕೋಟಿ ಅನುದಾನ ನೀಡಿದೆ. ಹಾಗಾಗಿ ಸಮಾಜ ಬಾಂಧವರು ಬಿಜೆಪಿ ಅಭ್ಯರ್ಥಿಗೆ ಮತ ಹಾಕದೇ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಗೆ ಮತ ಹಾಕಿ ಬೆಂಬಲಿಸಿ ಎಂದರು.

ಪತ್ರಿಕಾಗೋಷ್ಠಿಯಲ್ಲಿ ಗಿರೀಶಗೌಡ ಪಾಟೀಲ ಯರಗಲ್, ರಾವುತಗೌಡ ಬಿರಾದಾರ, ಪ್ರವೀಣ ಕಂಠಿಗೊಂಡ, ಬ್ಲಾಕ್ ಕಾಂಗ್ರೆಸ್ ತಾಲೂಕಾಧ್ಯಕ್ಷ ಸುರೇಶ ಪೂಜಾರ ಸೇರಿದಂತೆ ಅನೇಕರು ಉಪಸ್ಥಿತ–ರಿದ್ದರು.

# ಲಿಂಗಾಯತರನ್ನು ರಾಜಕೀಯವಾಗಿ ಬೆಳೆಸದ ಜಿಗಜಿಣಗಿ :ಬಬಲೇಶ್ವರ

ಉದಯರಶ್ಮಿ ನ್ಯೂಸ್



ವಿಜಯಪುರ: ಲಿಂಗಾಯತ ಮುಖಂಡರಾದ ಎ.ಬಿ.ಪಾಟೀಲ, ಉಮೇಶ ಕತ್ತಿ, ಲಕ್ಷ್ಮಣ ಸವದಿ ಅವರು ತಮ್ಮ ಸ್ವ–ಸಾಮರ್ಥ್ಯದಿಂದ ಬೆಳೆದಿದ್ದಾರೆ ಹೊರತು, ಅವರಿಗೆ ರಾಜಕೀಯವಾಗಿ ರಮೇಶ ಜಿಗಜಿಣಗಿ ಅವರು ಬೆಳೆಸಿಲ್ಲ ಎಂದು ಕೆಪಿಸಿಸಿ ವಕ್ತಾರ ಸಂಗಮೇಶ ಬಬಲೇಶ್ವರ ತಿಳಿಸಿದ್ದಾರೆ.

ಭಾನುವಾರ ಪತ್ರಿಕಾಗೋಷ್ಠಿ ನಡೆಸಿದ ರಮೇಶ ಜಿಗಜಿಣಗಿ ಅವ–ರಿಗೆ ಪತ್ರಿಕಾ ಹೇಳಿಕೆ ಮೂಲಕ ಉತ್ತರ ನೀಡಿದ ಅವರು, 1983 ರಿಂದ ಕಳೆದ 40 ವರ್ಷಗಳ ಅವಧಿಯಲ್ಲಿ ಜಿಗಜಿಣಗಿ ಅವರು ಶಾಸಕರು, ಸಚಿವರು, ಸಂಸದರು ಹಾಗೂ ಕೇಂದ್ರ ಮಂತ್ರಿಗಳಾಗಿ ಸತತ ಅಧಿಕಾರ ಅನುಭವಿಸುತ್ತಿದ್ದಾಗ ಒಬ್ಬನೇ ಒಬ್ಬ ಕಾರ್ಯಕರ್ತನನ್ನು, ಯಾವುದೇ ಸಮುದಾಯದವರನ್ನು ಬೆಳೆಸಿಲ್ಲ ಎಂದಿದ್ದಾರೆ.

ಕಳೆದ 30 ವರ್ಷಗಳಿಂದ ಆರು ಬಾರಿ ಸಂಸದರಾಗಿರುವ ಇವರು ರಾಜಕೀಯವಾಗಿ ನಾಯಕರನ್ನು ಬೆಳೆಸುವುದು ಇರಲಿ, ಒಬ್ಬರಿಗಾದರೂ ದೆಹಲಿಗೆ ಕರೆದುಕೊಂಡು ಹೋಗಿ, ತಮ್ಮ ಬಂಗಲೆಯನ್ನು ತೋ–ರಿಸಿದ್ದಾರೆಯೇ? ಎಂದು ಸಂಗಮೇಶ ಬಬಲೇಶ್ವರ ಪ್ರಶ್ನಿಸಿದ್ದಾರೆ.

ದೆಹಲಿಯಂತೂ ದೂರದ ಮಾತು, ಭೂತನಾಳ ಕೆರೆ ಪಕ್ಕದಲ್ಲಿರುವ ಐಶಾರಾಮಿ ಬಂಗಲೆಗೆ ಜಿಲ್ಲೆಯಿಂದ ಹುಡುಕಿಕೊಂಡು ಬರುವ ಬಿಜೆಪಿ ಕಾರ್ಯಕರ್ತರನ್ನು ಒಳಗೆ ಬಿಟ್ಟುಕೊಂಡಿದ್ದಾರೆಯೇ? ಎಂದು ಪ್ರಶ್ನಿಸಿರುವ ಸಂಗಮೇಶ ಬಬಲೇಶ್ವರ, ಚುನಾವಣೆ ಬಂದಾಗ ನನ್ನಲ್ಲಿ ದುಡ್ಡು ಇಲ್ಲ ಎಂದು ನಾಟಕ ಮಾಡುವ ಇವರ ಆಸ್ತಿ ಎಷ್ಟು ಪಟ್ಟು ಹೆಚ್ಚಳವಾಗಿದೆ? ಎಂಬುದಕ್ಕೆ ಅಧಿಕೃತ ದಾಖಲೆ ಇದ್ದು, ಸೋಲಿನ ಭಯದಿಂದ ಏನೇನೋ ಬಡ–ಬಡಿಸುತ್ತಿದ್ದಾರೆ ಎಂದು ಕುಟುಕಿದ್ದಾರೆ.

ವಿಜಯಪುರದಿಂದ ಬೆಂಗಳೂರಿಗೆ ಒಂದು ರೈಲು ಆರಂಭಿಸದ ಇವರನ್ನು ಜನರೆ ಮನೆಗೆ ಕಳುಹಿಸಲಿದ್ದಾರೆ. ಕಾಂಗ್ರೆಸ್ ಅಭ್ಯರ್ಥಿ ರಾಜು ಆಲಗೂರ ಅವರ ಗೆಲುವು ನಿಶ್ಚಿತವಾಗಿರುವುದನ್ನು ತಿಳಿದುಕೊಂಡು ಹತಾಶರಾಗಿ ಮತ್ತು ಸೋಲಿನ ಭಯದಿಂದ ಏನೇನೋ ಮಾತನಾಡುತ್ತಿದ್ದಾರೆ ಎಂದು ಮಖಂಡ ಸಂಗಮೇಶ ಬಬಲೇಶ್ವರ ಕಿಡಿಕಾರಿದ್ದಾರೆ.

# ಮೋದಿ & ಜಿಗಜಿಣಗಿಗೆ ಮತ ಕೇಳುವ ನೈತಿಕತೆ ಇಲ್ಲ :ಎಂ.ಬಿ.ಪಾಟೀಲ

**ಉದಯರಶ್ಮಿ ನ್ಯೂಸ್**



ವಿಜಯಪುರ: ಪ್ರಧಾನಿ ಮೋದಿ ಮತ್ತು ಸಂಸದ ಜಿಗಜಿಣಗಿ ಅವರಿಗೆ ಮತ ಕೇಳಲು ಮುಖ ಉಳಿಸಿಕೊಂಡಿಲ್ಲ. ಅವರಿಗೆ ಮತ ಕೇಳುವ ನೈತಿಕತೆಯೇ ಇಲ್ಲ ಎಂದು ಎಂದು ಕೈಗಾರಿಕೆ ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ. ಬಿ. ಪಾಟೀಲ ಹೇಳಿದ್ದಾರೆ.

ಶನಿವಾರ ತಿಕೋಟಾ ತಾಲೂಕಿನ ಧನರ್ಗಿ ಮತ್ತು ಘೋಣಸಗಿ ಹಾಗೂ ವಿಜಯಪುರ ನಗರದ ಭೂತನಾಳ ತಾಂಡಾದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಪ್ರೊ. ರಾಜು ಆಲಗೂರ ಪರ ಮತಯಾಚಿಸಿ ಅವರು ಮಾತನಾಡಿದರು.

ಪ್ರಧಾನಿ ಮೋದಿ ಮತ್ತು ಸಂಸದ ರಮೇಶ ಜಿಗಜಿಣಗಿ ಮತ ಕೇಳಲು ಯಾವುದೇ ಮುಖ ಉಳಿಸಿಕೊಂಡಿಲ್ಲ. ಚಿತ್ತೂ ಇಲ್ಲ, ಪಟ್ಟೂ ಇಲ್ಲ. ಎಲ್ಲ ಕಡೆ ಮೋದಿ ಮತ್ತು ಸಂಸದರ ವಿರೋಧಿ ಗಾಳಿ ಬೀಸುತ್ತಿದೆ. ಸಾಮಾಜಿ–ಕ ಜಾಲತಾಣಗಳಲ್ಲಿಯೂ ಈಗ ಎಲೆಕ್ಟ್ರಾಲ್ ಬಾಂಡ್ ಹಗರಣದ ಚರ್ಚೆ ವ್ಯಾಪಕವಾಗಿದ್ದು, ಜನಜಾಗೃತರಾಗಿದ್ದಾರೆ. ರಾಜ್ಯದಲ್ಲಿ ಕಾಂಗ್ರೆಸ್ ಜಾರಿಗೆ ತಂದಿರುವ ಪಂಚ ಗ್ಯಾರಂಟಿ ಯೋಜನೆಗಳು ಮತ್ತು ಕೇಂದ್ರದಲ್ಲಿ ಮೈತ್ರಿಕೂಟ ಅಧಿಕಾರಕ್ಕೆ ಬಂದರೆ ಘೋಷಣೆ ಮಾಡಲಾಗಿರುವ ಪಂಚ ಗ್ಯಾರಂಟಿ ಯೋಜನೆಗಳು ಈಗ ಜನಮನಗೆದ್ದಿವೆ. ಹೀಗಾಗಿ ಮತದಾರರು ಕಾಂಗ್ರೆಸ್ ನಾಯಕರ ಮುಖ ನೋಡಿ ಮತ ಹಾಕಲಿದ್ದಾರೆ. ಈ ಮೂಲಕ ಪ್ರೊ. ರಾಜು ಆಲಗೂರ ಅವರಿಗೆ ಮತಹಾಕುವ ಮೂಲಕ ನಮ್ಮ ಕೈ ಹಿಡಿಯಲಿದ್ದಾರೆ ಎಂದು ತಿಳಿಸಿದರು.

ಕಾಂಗ್ರೆಸ್ ರೈತರು, ಬಡವರು, ಜನಸಾಮಾನ್ಯರ ಪಕ್ಷ. ಬಿಜೆಪಿ ಶ್ರೀಮಂತರ ಪಕ್ಷ. ನಾವು ಜನಸಾಮಾನ್ಯರು, ರೈತರ ಭಾವನೆಗಳನ್ನು ಅರ್ಥ ಮಾಡಿಕೊಂಡು ಕೆಲಸ ಮಾಡುತ್ತೇವೆ. ಅವರು ಶ್ರೀಮಂತರ ಹಿತ ಕಾಪಾಡಲು ಅಧಿಕಾರ ನಡೆಸುತ್ತಾರೆ. ಕಾಂಗ್ರೆಸ್ ಅಭಿವೃದ್ಧಿ ಕಾರ್ಯಗಳು ದೇಶದ ಅಭಿಬೃದ್ಧಿಗೆ ಭದ್ರ ಬುನಾದಿ ಹಾಕಿದೆ. ಅಹಿಂದ ವರ್ಗಕ್ಕೆ ಕಾಂಗ್ರೆಸ್ ಅಪಾರ ಕೊಡುಗೆ ನೀಡಿದೆ. ಹೀಗಾಗಿ ಶೂನ್ಯ ಕೆಲಸ ಮಾಡಿರುವ ಸಂಸದರ ಬದಲು ವಿದ್ಯಾವಂತ, ಕ್ರಿಯಾಶೀಲ ಅಭ್ಯರ್ಥಿ ಪ್ರೊ. ರಾಜು ಆಲಗೂರ ಅವರಿಗೆ ಮತ ಹಾಕಿ ಗೆಲ್ಲಿಸಬೇಕು ಎಂದು ಅವರು ಮನವಿ ಮಾಡಿದರು.

ಈ ಸಂದರ್ಭದಲ್ಲಿ ದಾನಪ್ಪ ಚೌಧರಿ, ಆನಂದ ಗೊಳಸಂಗಿ, ಸೋಮನಾಥ ಬಾಗಲಕೋಟ, ಯಾಕೂಬ್ ಜತ್ತಿ, ಕೆ. ಆರ್. ಮೇಡೆಗಾರ, ಮಹಾನಗರ ಪಾಲಿಕೆ ಸದಸ್ಯ ರಾಜು ಅಣದು ಚವ್ಹಾಣ ಮಾತನಾಡಿ, ಸಚಿವ ಎಂ. ಬಿ. ಪಾಟೀಲ ಅವರು ಅಭಿವೃದ್ಧಿ ಕಾರ್ಯಗಳ ಮೂಲಕ ನಮ್ಮ ಭಾಗದಲ್ಲಿ ಸರ್ವಾಂಗೀಣ ಅಭಿವೃದ್ಧಿ ಮಾಡುತ್ತಿದ್ದಾರೆ. ಹೀಗಾಗಿ ನಮ್ಮೆಲ್ಲರ ಹಿತ ಬಯಸುವ ಎಂ. ಬಿ. ಪಾಟೀಲ ಅವರ ಕೈ ಬಲಪಡಿಸಲು ನಾವೆಲ್ಲರೂ ಕಾಂಗ್ರೆಸ್ ಅಭ್ಯರ್ಥಿ ಪ್ರೊ. ರಾಜು ಆಲಗೂರ ಪರ ಮತಹಾಕಿ ಗೆಲ್ಲಿಸೋಣ ಎಂದು ಹೇಳಿದರು.

ಈ ವೇಳೆ ಕಾಂಗ್ರೆಸ್ ಪ್ರಣಾಳಿಕೆಯಲ್ಲಿ ಘೋಷಿಸಿರುವ ಪಂಚ ಗ್ಯಾರಂಟಿ ಯೋಜನೆಗಳ ಮಾದರಿ ಕಾರ್ಡುಗಳನ್ನು ಸಚಿವರು ಸಾಂಕೇತಿಕವಾಗಿ ಮಹಿಳೆಯರಿಗೆ ವಿತರಿಸಿದರು.

ಈ ಸಂದರ್ಭದಲ್ಲಿ ಸುಭಾಸ ಛೋತ, ಚನ್ನಪ್ಪ ದೈಗೊಂಡ, ದುಂಡಪ್ಪ ವಠಾರ, ಮಾಳಪ್ಪ ಪೂಜಾರಿ, ನಾಗಪ್ಪ ಜೋರಾಪುರ, ಬಸವರಾಜ ತೇಲಿ, ರಾಜು ಜೋರಾಪುರ, ಅಮಗೊಂಡ ಪೂಜಾರಿ, ಬಂದೇನವಾಜ ಮುಲ್ಲಾ, ಅಪ್ಪಾಸಾಹೇಬ ನಾಯಕ, ಅಂಬ–ರೀಷ ಪಾಟೀಲ, ಗುರಲಿಂಗ ಮಾಳಿ, ಬಸಲಿಂಗ ನಿಡೋಣಿ, ಶ್ರೀಮಂತ ಬಂಡಗಾರ, ಭಾವಸಾಬ ಮಾನವರ, ಶ್ರೀಕಾಂತ ರಾಠೋಡ, ಕಿಸನ ಮಹಾರಾಜ, ಪ್ರಕಾಶ ಮಹಾರಾಜ, ಮೆಘು ಮಹಾರಾಜ, ರಾಜು ಜಾಧವ, ಕಾಸು ನಾಯಕ, ಹುನ್ನು ಶಂಕರ ನಾಯಕ, ಸುರೇಶ ಬಿಜಾಪುರ, ಭೂತನಾಳ ತಾಂಡಾದ ನಾಯಕ, ಕಾರಬಾರಿ, ಥಾವ ಪ್ರಮುಖರು ಉಪಸ್ಥಿತರಿದ್ದರು.

# ಕಾಂಗ್ರೆಸ್ ಸರ್ಕಾರದ ಬಗ್ಗೆ ಜನತೆಗೆ ಭ್ರಮನಿರಸನ :ಶಹಾಪೂರ

**ಉದಯರಶ್ಮಿ ನ್ಯೂಸ್**



ವಿಜಯಪುರ: ಎಐಸಿಸಿ ಧುರೀಣ ರಾಹುಲ್ ಗಾಂಧಿ ವಿಜಯಪುರಕ್ಕೆ ಬಂದಾಗ ಕಾಂಗ್ರೆಸ್ ಅಭ್ಯರ್ಥಿ ಪ್ರೊ.ರಾಜು ಆಲಗೂರ ಅವರೇ ಆ ಸಭೆಯಲ್ಲಿ ಇರಲಿಲ್ಲ, ಅವರ ಫೋಟೋ ಸಹ ಬ್ಯಾನರನಲ್ಲಿ ಅಲ್ಲಿರಲಿಲ್ಲ, ರಾಹುಲ್ ಗಾಂಧೀ ಆಲಗೂರ ಅವರ ಹೆಸರು ಸಹ ಉಲ್ಲೇಖಿಸಿ ಮತಯಾಚಿಸಲಿಲ್ಲ, ಪ್ರಚಾರ ಸಭೆಗೆ ಅಭ್ಯರ್ಥಿಯನ್ನೇ ಆಹ್ವಾನಿಸದೆ ಕಾಂಗ್ರೆಸ್ ಈಗಾಗಲೇ ಸೋಲು ಒಪ್ಪಿಕೊಂಡಿದೆ ಎಂದು ವಿಧಾನ ಪರಿಷತ್ ಸದಸ್ಯ ಅರುಣ ಶಹಾಪೂರ ಹೇಳಿದರು.

ಭಾನುವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಹಾಲಿ ಶಾಸಕರಾಗಿದ್ದ ಪ್ರೊ.ರಾಜು ಆಲಗೂರ ಅವರಿಗೆ ಕಾಂಗ್ರೆಸ್ ಪಕ್ಷ 2018 ರಲ್ಲಿ ಟಿಕೆಟ್ ಏಕೆ ನಿರಾಕರಣೆ ಮಾಡಿತು? 2024 ರ ಚುನಾವಣೆಯಲ್ಲಿಯೂ ಸಹ ಅವರಿಗೆ ಕಾಂಗ್ರೆಸ್ ಟಿಕೇಟ್ ನಿರಾಕರಣೆ ಮಾಡಿತ್ತು, ಈಗ ಲೋಕಸಭೆಗೆ ಯಾರೊಬ್ಬರು ಅಭ್ಯರ್ಥಿಯೇ ಕಾಂಗ್ರೆಸ್ ಬಳಿ ಇರದ್ದರಿಂದ ಅನಿವಾರ್ಯವಾಗಿ ಆಲಗೂರ ಅವರ ಕೊರಳಿಗೆ ಈ ಜವಾಬ್ದಾರಿ ವಹಿಸಿದೆ ಎಂದರು.

ಈ ಹಿಂದೆ ನಮ್ಮ ಸರ್ಕಾರದ ಮೇಲೆ ಆರೋಪ ಮಾಡಿದ ಗುತ್ತಿಗೆದಾರರು ಸಹ ಈ ಸರ್ಕಾರದ ಮೇಲೆ ಅಸಮಾಧಾನಗೊಂಡು ನ್ಯಾಯಾಲಯದ ಮೆಟ್ಟಿಲೇರಿದ್ದಾರೆ, ರಾಜ್ಯ ಕಾಂಗ್ರೆಸ್ ಸರ್ಕಾರ ಒಂದೇ ಒಂದು ಅಭಿವೃದ್ಧಿ ಕಾಮಗಾರಿಗೆ ಲೋಕಾರ್ಪಣೆ ಮಾಡುವಲ್ಲಿ ಅಷ್ಟೇ ಏಕೆ, ಶಾಸಕರಿಗೆ ಪ್ರದೇಶಾಭಿವೃದ್ಧಿ ನಿಧಿ ಅನುದಾನ ನೀಡುವಲ್ಲಿಯೂ ವಿಫಲವಾಗಿದೆ. ಹೀಗಾಗಿ ಕಾಂಗ್ರೆಸ್ ಶಾಸಕರಲ್ಲಿಯೇ ಅತೃಪ್ತಿ ಪ್ರಬಲವಾಗಿದೆ ಎಂದು ದೂರಿದರು.

ನೇತೃತ್ವದ ಬಗ್ಗೆ ಉತ್ತರ ನೀಡಲು ಸಾಧ್ಯವಿಲ್ಲದ ಕಾಂಗ್ರೆಸ್ ಪಕ್ಷದಲ್ಲಿ ಪ್ರಧಾನಮಂತ್ರಿ ಅಭ್ಯರ್ಥಿಯೇ ಇಲ್ಲದಂತಾಗಿದೆ. ಇದಕ್ಕೆ ವ್ಯತಿ–ರಿಕ್ತವಾಗಿ ಮೋದಿಜಿ ಅವರ ಅಖಂಡ ನೇತೃತ್ವ ಬಿಜೆಪಿ ಹೆಗಲಿದೆ ಇದೆ. ಕಳೆದ ವಿಧಾನಸಭಾ ಗೆಲುವಿನ ಗುಂಗಿನಿಂದ ಕಾಂಗ್ರೆಸ್ ಇನ್ನೂ ಹೊರಬಂದಿಲ್ಲ. ಇದೇ ಗುಂಗಿನಲ್ಲಿ ಲೋಕಸಭೆಯನ್ನೂ ಜಯಿಸುವ ಭ್ರಮೆ ಕಾಂಗ್ರೆಸ್ ಪಕ್ಷದಲ್ಲಿದೆ, ಒಂದು ರೀತಿ ಈ ಭ್ರಮೆ ಹೊರತುಪಡಿಸಿ ಯಾವ ರೀತಿಯ ಬತ್ತಳಿಕೆಯೂ ಇಲ್ಲ. ಕೇವಲ ಮೋದಿಜಿ ಅವರನ್ನು ತೆಗಳುವುದೊಂದಕ್ಕೆ ಕಾಂಗ್ರೆಸ್ ಸೀಮಿತವಾಗಿದೆ ಎಂದು ಶಹಾಪೂರ ಹೇಳಿದರು.

ಕಾಂಗ್ರೆಸ್ ಸರ್ಕಾರ ಜಾ–ರಿಗೊಳಿಸಿರುವ ಗ್ಯಾರಂಟಿ ಯೋಜನೆಯಡಿಯಲ್ಲಿ ಅನೇಕ ಜನರಿಗೆ ಆಗಿರುವ ಅನ್ಯಾಯವನ್ನು ನಾವು ಸಮರ್ಥವಾಗಿ ಬಿಂಬಿಸಿದ್ದೇವೆ. ಒಂದೇ ವರ್ಷದಲ್ಲಿ ಕಾಂಗ್ರೆಸ್ ಸರ್ಕಾರದ ಬಗ್ಗೆ ಭ್ರಮನಿರಸನವಾಗಿದೆ ಎಂದು ಅರುಣ ಶಹಾಪೂರ ನುಡಿದರು.

## 65 ಮಹಾಶಕ್ತಿ ಕೇಂದ್ರಗಳಲ್ಲಿ ಪ್ರಚಾರ

ಬಿಜೆಪಿ ಪ್ರಚಾರ ಸಾಗಿ ಬಂದಿರುವ ಕುರಿತಾಗಿಯೂ ವಿವರಣೆ ನೀಡಿದ ಶಹಾಪೂರ, ಭಾರತೀಯ ಜನತಾ ಪಕ್ಷ ಜಿಲ್ಲೆಯಲ್ಲಿ ಒಟ್ಟು 65 ಮಹಾಶಕ್ತಿ ಕೇಂದ್ರಗಳಲ್ಲಿ ಯಶಸ್ವಿ ಪ್ರಚಾರ ನಡೆಸಿದೆ, ಪಾದಯಾತ್ರೆ, ಬಹಿರಂಗ ಸಭೆ ಹಾಗೂ ಈ ಬಾರಿ ಔಪಚಾರಿಕ ಮತಯಾಚಿಸುವ ಕಟ್ಟೆ ಸಭೆಗಳ ಮೂಲಕ ಮತಯಾಚಿಸುವ ವಿಭಿನ್ನ ಪ್ರಯೋಗವನ್ನು ಯಶಸ್ವಿಯಾಗಿ ನಡೆಸಲಾಗಿದೆ, ಈ ಕಟ್ಟೆ ಸಭೆಯಲ್ಲಿ ರಾಷ್ಟ್ರೀಯ ವಿಷಯಗಳ ಬಗ್ಗೆ ಚರ್ಚೆ ನಡೆಸಲಾಗಿದ್ದು,100 ಕ್ಕೂ ಹೆಚ್ಚು ಕಟ್ಟೆಸಭೆಗಳನ್ನು ಯಶಸ್ವಿಯಾಗಿ ನಡೆಸಲಾಗಿದೆ, ಬಿಜೆಪಿ ಅಭ್ಯರ್ಥಿ ರಮೇಶ ಜಿಗಜಿಣಗಿ ಅವರು ಕಳೆದ ಬಾರಿಗಿಂತ ಹೆಚ್ಚಿನ ಮತಗಳ ಅಂತರದಿಂದ ಗೆಲುವು ಸಾಧಿಸುವುದು ಶತಸಿದ್ಧ ಎಂದು ಭವಿಷ್ಯ ನುಡಿದರು.

ಬಿಜೆಪಿ ಮುಖಂಡರಾದ ಸಂಜಯ ಪಾಟೀಲ ಕನಮಡಿ, ಶಂಕರಗೌಡ ಪಾಟೀಲ, ಭರತ ಕೋಳಿ, ಕೃಷ್ಣಾ ಗುನ್ನಾಳಕರ, ರವಿ ವಗ್ಗೆ, ವಿಜಯ ಜೋಶಿ ಮೊದಲಾದವರು ಪತ್ರಿಕಾಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

# ಮೋದಿ ನೀಡಿದ ಭರವಸೆಗಳೆಲ್ಲವೂ ಹುಸಿಯಾಗಿವೆ :ಎಂ.ಬಿ.ಪಾಟೀಲ

**ಉದಯರಶ್ಮಿ ನ್ಯೂಸ್**



ವಿಜಯಪುರ: ಸುಳ್ಳು ಹೇಳುವ ಮೋದಿ ಮತ್ತು ಬಿಜೆಪಿಯನ್ನು ಮನೆಗೆ ಕಳುಹಿಸುವ ಸಮಯ ಬಂದಿದ್ದು, ಮಂಗಳವಾರ ಮತದಾರರರು ಈ ಅವಕಾಶವನ್ನು ಸದುಪಯೋಗ ಪಡಿಸಿಕೊಂಡು ಕಾಂಗ್ರೆಸ್ ಅಭ್ಯರ್ಥಿ ಪ್ರೊ. ರಾಜು ಆಲಗೂರ ಅವರನ್ನು ಗೆಲ್ಲಿಸಬೇಕು ಎಂದು ಕೈಗಾರಿಕೆ ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ. ಬಿ. ಪಾಟೀಲ ಹೇಳಿದ್ದಾರೆ.

ರವಿವಾರ ತಿಕೋಟಾ ತಾಲೂಕಿನ ಹೊನವಾಡ, ಬಬಲೇಶ್ವರ ತಾಲೂಕಿನ ಅರ್ಜುಣಗಿ, ಕಾತ್ರಾಳ ಮತ್ತು ಹಲಗಣಿಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಪ್ರೊ. ರಾಜು ಆಲಗೂರ ಪರ ಮತಯಾಚಿಸಿ ಮಾತನಾಡಿದ ಅವರು, ಜಿಲ್ಲೆ, ದೇಶದ ಭವಿಷ್ಯ ನಿರ್ಣಯಿಸುವ ಶುಭ ಘಳಿಗೆ ಈಗ ಬಂದಿದ್ದು, ಕಾಂಗ್ರೆಸ್ ಅಭ್ಯರ್ಥಿ ಪ್ರೊ.ರಾಜು ಆಲಗೂರ ಅವರಿಗೆ ಮತ ಹಾಕಿ ಗೆಲ್ಲಿಸೋಣ ಎಂದು ಅವರು ಹೇಳಿದರು.

ನರೇಂದ್ರ ಮೋದಿ ಅವರಿಗೆ 10 ವರ್ಷ ಮೋದಿಗೆ ಅವಕಾಶ ನೀಡಿದ್ದು ಸಾಕು. ಜಿಗಜಿಣಗಿ ಅವರಿಗೆ ಆರು ಬಾರಿ ಅವಕಾಶ ನೀಡಿದ್ದೂ ಸಾಕು. ಮೋದಿ ಅವರು ನೀಡಿದ ಭರವಸೆಗಳೆಲ್ಲವೂ ಹುಸಿಯಾಗಿವೆ. ಬೆಲೆ ಏರಿಕೆ, ನಿರುದ್ಯೋಗ, ಅಭಿವೃದ್ಧಿಯ ಕಡೆಗಣನೆಯಿಂದಾಗಿ ರೈತರು, ಬಡವರು, ಜನಸಾಮಾನ್ಯರ ತತ್ತರಿಸಿದ್ದಾರೆ. ಗೊಬ್ಬರ ಬೆಲೆ ಮೂರು ಪಟ್ಟು ಹೆಚ್ಚಾಗಿದೆ. ದ್ರಾಕ್ಷಿ ಔಷಧಿ ದರ ಐದು ಪಟ್ಟು ತುಟ್ಟಿಯಾಗಿದೆ. ರೈತರ ಆದಾಯ ದ್ವಿಗುಣವಾಗುವ ಬದಲು ಕೃಷಿ, ತೋಟಗಾರಿಕೆ ನಿರ್ವಹಣೆ ವೆಚ್ಚ ದ್ವಿಗುಣವಾಗಿದೆ. ಮೋದಿ ಮಾತುಗಳು ಹೊಟ್ಟೆ ತುಂಬಿಸುವುದಿಲ್ಲ ಎಂಬುದು ಜನರಿಗೆ ಅರಿವಾಗಿದೆ. ಕಾಂಗ್ರೆಸ್ ಈ ಮುಂಚೆ ಜನರ ಬದುಕು ಕಟ್ಟಿಕೊಟ್ಟಿದೆ. ಈಗ ಪಂಚ ಗ್ಯಾರಂಟಿಗಳ ಮೂಲಕ ಸರ್ವ ಸಮುದಾಯಗಳ ಆರ್ಥಿಕ ಸ್ಥಿತಿ ಸುಧಾರಿಸುತ್ತಿದೆ. ಈ ಚುನಾವಣೆಯಲ್ಲಿ ಕೇಂದ್ರದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ಪಂಚ ಗ್ಯಾರಂಟಿ ಯೋಜನೆಗಳ ಮೂಲಕ ದೇಶದ ರೈತರು, ಮಹಿಳೆಯರು, ಯುವಕರು ಹಾಗೂ ಸರ್ವ ಸಮುದಾಯದ ಸರ್ವಾಂಗೀಣ ಅಭಿವೃದ್ಧಿ ಮಾಡಲಿದೆ ಎಂದು ಅವರು ತಿಳಿಸಿದರು.

ಪ್ರಾಣಿ ಪಕ್ಷಿಗಳು ಕೂಡ ಉಪಕಾರ ಮಾಡಿದವರನ್ನು ನೆನೆಯುತ್ತವೆ. ಮನುಷ್ಯರಾದ ನಾವು ನಮಗೆ ನೆರವಾದರನ್ನು ಮರೆಯಬಾರದು. ವಿಜಯಪುರ ಜಿಲ್ಲೆಯನ್ನು ಬಾರಮತಿ ಮಾದ–ರಿಯಲ್ಲಿ ಅಭಿವೃದ್ಧಿ ಪಡಿಸುವ ಕನಸನ್ನು ಹೊಂದಿದ್ದೇನೆ. ನಾವು ರೈತರ ಜನ. ನಮ್ಮದು ನೀರಿನ ಜಾತಿ. ನೀರು ಮತ್ತು ಅಭಿವೃದ್ಧಿ ನಮ್ಮ ಧರ್ಮ ಎಂದು ಅವರು ಹೇಳಿದರು.

ಈ ವೇಳೆ ಕಾಂಗ್ರೆಸ್ ಮುಖಂಡರಾದ ಅರವಿಂದ ಮಸಳಿ, ಜಕ್ಕಪ್ಪ ಯಡವೆ, ಚನ್ನಪ್ಪ ಕೊಪ್ಪದ, ಬಾಪುಗೌಡ ಪಾಟೀಲ ಶೇಗುಣಸಿ, ಡಾ. ಕೆ. ಎಚ್. ಮುಂಬಾರಡ್ಡಿ, ಬಸನಗೌಡ ಬ. ಪಾಟೀಲ ಮಾತನಾಡಿದರು.

ಈ ಸಂದರ್ಭದಲ್ಲಿ ವಿಜಯಕುಮಾರ ಹಿರೇಮಠ, ಸಾಬು ಖಂಡೆಕರ, ರಾಮಗೊಂಡ ಚಾವರ, ತುಕಾರಾಮ ದಡಕೆ, ಸುರೇಶಗೌಡ ಪಾಟೀಲ, ಸಿದ್ದಪ್ಪ ಬೆಳಗಾವಿ, ಶ್ಯಾಮು ಬಡಳ್ಳಿ, ರಫೀಕ್ ಮಕಾಂದಾರ, ರಮೇಶ ದೇಸಾಯಿ, ಸುಲ್ತಾನ ಹೊಕ್ಕುಂಡಿ, ರಫೀಕ್ ಸೋನಾರ, ಕಲ್ಲಪ್ಪಗೌಡ ನ್ಯಾಮಗೌಡ, ಎಂ. ಎನ್. ಅಂಗಡಿ, ಮುದಕಪ್ಪಗೌಡ ಪಾಟೀಲ, ಮಲ್ಲಪ್ಪ ಕೆಂಪವಾಡ, ಮುತ್ತಪ್ಪ ವಾಣಿ, ರಾಮನಿಂಗ ಕೊಕಟನೂರ, ಎಸ್. ಡಿ. ಗುಗ್ಗರಿ, ಬಾಳೇಶ ಪಡಸಲಗಿ, ರಂಗಪ್ಪ ಚಿಕ್ಕಲಕಿ, ಸಿದ್ಧರಾಯ ಬಿರಾದಾರ, ಸಂಗಪ್ಪ ಮನಗೂಳಿ, ಹನಮಂತಗೌಡ ಬಿರಾದಾರ, ಟಿ. ಎಸ್. ಕುಲಕರ್ಣಿ, ಬಸವರಾಜ ಬಡ್ರಿ, ಡಾ. ಕೆ. ಎಚ್. ಮುಂಬಾರೆಡ್ಡಿ ಮುಂತಾದವರು ಉಪಸ್ಥಿತರಿದ್ದರು.

# ಲಾರಿಯ ಹಿಂಬದಿಗೆ ಬಸ್ ಡಿಕ್ಕಿ :ನಾಲ್ವರಿಗೆ ಗಾಯ

**ಉದಯರಶ್ಮಿ ನ್ಯೂಸ್**



ದೇವರಹಿಪ್ಪರಗಿ: ರಸ್ತೆ ಪಕ್ಕ ನಿಂತಿದ್ದ ಲಾರಿಯ ಹಿಂಬದಿಗೆ ಕೆ–ಎಸ್‌ಆರ್‌ಟಿಸಿ ಬಸ್ ಡಿಕ್ಕಿ ಹೊಡೆದು ಅಫಘಾತ ಸಂಭವಿಸಿರುವ ಘಟನೆ ಪಟ್ಟಣದಲ್ಲಿ ಜರುಗಿದೆ.

ಪಟ್ಟಣದಲ್ಲಿ ಭಾನುವಾರ ಈ ಘಟನೆ ಸಂಭವಿಸಿದ್ದು, ಪಟ್ಟಣದ ಪಾಟೀಲ ಪೆಟ್ರೋಲ್ ಪಂಪ್ ಹತ್ತಿರ ನಿಂತಿದ್ದ ಲಾರಿಯ ಹಿಂಬದಿಗೆ ವಿಜಯಪುರದಿಂದ ಕಲಬುರ್ಗಿಗೆ ತೆರಳುತ್ತಿದ್ದ ಕೆಎ–32 ಎಫ್ 2626 ಸಂಖ್ಯೆಯ ಬಸ್ ಅಪ್ಪಳಿಸಿದ ಪರಿಣಾಮ ಬಸ್‌ನಲ್ಲಿ ಇದ್ದ ಪ್ರಯಾಣಿಕರಲ್ಲಿ ನಾಲ್ವರು ಮಹಿಳೆಯರು ಗಾಯಗೊಂಡಿದ್ದಾರೆ.

ಅಫಘಾತದ ಸುದ್ದಿ ತಿಳಿಯುತ್ತಿದ್ದಂತೆಯೇ ಸ್ಥಳಕ್ಕೆ ತೆರಳಿದ ಪೊಲೀಸರು ಹೆಚ್ಚಿನ ಗಾಯಗಳಿಂದ ನರಳುತ್ತಿದ್ದ ಗಬಸಾವಳಗಿ ಗ್ರಾಮದ ಮಹಿಳೆಗೆ ತಕ್ಷಣವೇ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಕರೆದೊಯ್ದು ಚಿಕಿತ್ಸೆ ಕೊಡಿಸಿದ ಪರಿಣಾಮ ಮಹಿಳೆ ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಘಟನೆಗೆ ನಿಖರ ಕಾರಣ ತಿಳಿದು ಬಂದಿಲ್ಲವಾದರೂ, ಚಾಲಕನ ಅಜಾಗರೂಕ ಚಾಲನೆಯೇ ಅಫಘಾತಕ್ಕೆ ಮೂಲಕಾರಣ ಎಂದು ಪ್ರಯಾಣಿಕರು ಹಾಗೂ ಪ್ರತ್ಯಕ್ಷದರ್ಶಿಗಳು ದೂರುವುದು ಕಂಡು ಬಂತು.

# ರೈತ ಸಂಘದ ಜಿಲ್ಲಾಧ್ಯಕ್ಷರಾಗಿ ಕೆಂಬೋಗಿ ಆಯ್ಕೆ

**ಉದಯರಶ್ಮಿ ನ್ಯೂಸ್**



ಇಂಡಿ: ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ವಿಜಯಪುರ ಜಿಲ್ಲಾ ಅಧ್ಯಕ್ಷರಾಗಿ ಎಸ್ ಬಿ ಕೆಂಬೋಗಿ ಅವರನ್ನು ಆಯ್ಕೆ ಮಾಡಿ ರಾಜ್ಯಾಧ್ಯಕ್ಷ ಚಂದ್ರಶೇಖರ ಕೋಡಿಹಳ್ಳಿ ಆದೇಶ ಪತ್ರ ನೀಡಿದ್ದಾರೆ.

ಗುರುವಾರ, ಬೆಂಗಳೂರು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಕಛೇ–ರಿಯಲ್ಲಿ ವಿಜಯಪುರ ಜಿಲ್ಲಾ ನೂತನ ಅಧ್ಯಕ್ಷರನ್ನಾಗಿ ಎಸ್ ಬಿ ಕೆಂಬೋಗಿ ಅವರನ್ನು ಆಯ್ಕೆ ಮಾಡಿದರು. ಆ ನಂತರ ರಾಜ್ಯಾಧ್ಯಕ್ಷ ಚಂದ್ರಶೇಖರ ಕೋಡಿಹಳ್ಳಿ ಮಾತನಾಡಿದ ಅವರು, ಜಿಲ್ಲೆಯ ರೈತರ ಆಶೋತ್ತರಗಳಿಗೆ ಸ್ಪಂದಿಸುವ ಹಾಗೂ ಅವರ ಸಮಸ್ಯೆಗಳಿಗೆ ಧ್ವನಿಯಾಗಬೇಕು ನಿಲ್ಲಬೇಕು. ರಾಜ್ಯ ರೈತ ಸಂಘವು ಕೆಲವು ಸೈದ್ಧಾಂತಿಕ ವಿಚಾರಗಳನ್ನು ಮೈಗೂಡಿಸಿಕೊಂಡಿದ್ದು, ಈ ವಿಚಾರಗಳಿಗೆ ಮತ್ತು ಸಂವಿಧಾನ ಬದ್ಧ ನೀತಿ ನಿಯಮಗಳನ್ನು ಗಾಳಿಗೆ ತೋರದೆ ಶಿಸ್ತಿನಿಂದ ಕೆಲಸ ಮಾಡುವ ಅವಶ್ಯಕತೆ ಇದೆ. ಯಾವುದೇ ಮತ ಜಾತಿಗಳಿಗೆ ಮತ್ತು ಯಾವುದೇ ರಾಜಕೀಯ ಪಕ್ಷಗಳ ಸೋಂಕಿಲ್ಲದೇ ಪ್ರಾಮಾಣಿಕವಾಗಿ ಸಂಘ ನೀಡಿರುವ ಜವಾಬ್ದಾರಿ ಹುದ್ದೆಯನ್ನು ನಿಷ್ಠೆಯಿಂದ ಮಾಡಬೇಕೆಂದು ಹೇಳಿದರು.

ಈ ಸಂದರ್ಭದಲ್ಲಿ ಲಿಂಗಸೂಗುರ ತಾಲ್ಲೂಕು ರೈತ ಸಂಘದ ಶಿವಪುತ್ರಗೌಡ, ಬಿಇ ಸಿವಿಲ್ ಇಂಜಿನಿಯರ್ ಸುರೇಶ್ ಡೊಂಗ್ರೋಜ್, ಪತ್ರಕರ್ತ ಶಂಕರ್ ಜಮಾದಾರ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

# ಮುಕ್ತ–ನ್ಯಾಯಸಮ್ಮತ ಚುನಾವಣೆಗೆ ಜಿಲ್ಲಾಡಳಿತ ಸನ್ನದ್ಧ :ಡಿಸಿ ಟಿ.ಭೂಬಾಲನ್

**ಉದಯರಶ್ಮಿ ನ್ಯೂಸ್**

ವಿಜಯಪುರ: ಮುಕ್ತ ನ್ಯಾಯಸಮ್ಮತ ಹಾಗೂ ಸುಗಮ ಚುನಾವಣೆಗೆ ಜಿಲ್ಲಾಡಳಿತದ ವತಿಯಿಂದ ಸಕಲ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದ್ದು, ಮೇ.07ರಂದು ಬೆಳಿಗ್ಗೆ 7ರಿಂದ ಸಂಜೆ 6ರವರೆಗೆ ನಡೆಯಲಿರುವ ಮತದಾನಕ್ಕೆ ಎಲ್ಲಾ ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳಲಾಗಿದ್ದು, ವಿಜಯಪುರ ಲೋಕಸಭಾ ಕ್ಷೇತ್ರದಲ್ಲಿ ಒಟ್ಟು 19,46,090 ಮತದಾರರಿದ್ದು, ಜಿಲ್ಲೆಯಾದ್ಯಂತ ಒಟ್ಟು 2086 ಮತಗಟ್ಟೆಗಳನ್ನು ಸ್ಥಾಪಿಸಲಾಗಿದೆ ಜಿಲ್ಲಾ ಚುನಾವಣಾಧಿಕಾರಿಗಳಾದ ಜಿಲ್ಲಾಧಿಕಾರಿ ಟಿ.ಭೂಬಾಲನ್ ಅವರು ತಿಳಿಸಿದ್ದಾರೆ.

ಜಿಲ್ಲೆಯಾದ್ಯಂತ ಇದೇ ಮೇ.7 ರಂದು ನಡೆಯುವ ಮತದಾನ ಹಾಗೂ ಜೂನ್. 4 ರಂದು ನಡೆಯುವ ಮತ ಎಣಿಕೆ ಕಾರ್ಯಕ್ಕೆ ಜಿಲ್ಲಾಡಳಿತದಿಂದ ಸಕಲ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ ಎಂದು ಅವರು ತಿಳಿಸಿದ್ದಾರೆ.

ಮತದಾರರ ವಿವರ: ಜಿಲ್ಲೆಯಲ್ಲಿ 9,87,974 ಗಂಡು, 9,57,906 ಹೆಣ್ಣು ಹಾಗೂ 210 ಇತರೆ ಮತದಾರರು ಸೇರಿದಂತೆ ಒಟ್ಟು 19,46,090 ಮತದಾರರಿದ್ದಾರೆ. 85 ವರ್ಷಕ್ಕಿಂತ ಮೇಲ್ಪಟ್ಟು ಒಟ್ಟು 2357 ಮತದಾರರ ಪೈಕಿ 2170 ಮತದಾರರು ತಮ್ಮ ಮನೆಯಿಂದ ಮತ ಚಲಾಯಿಸಿದ್ದು, ಶೇ.92.06 ರಷ್ಟು ಮತದಾನವಾಗಿದೆ. ಅದರಂತೆ ಶೇ.40ಕ್ಕಿಂತ ಹೆಚ್ಚಿನ ದಿವ್ಯಾಂಗವಿರುವ (ಪಿಡಬ್ಲೂಡಿ) ಒಟ್ಟು 886 ಮತದಾರರ ಪೈಕಿ 854 ಮತದಾರರು ಮತ ಚಲಾಯಿಸುವ ಮೂಲಕ ಶೇ.96.38 ರಷ್ಟು ಮತದಾನವಾಗಿದೆ.

ಮತಗಟ್ಟೆಗಳ ವಿವರ: ವಿಜಯಪುರ ಲೋಕಸಭಾ ಚುನಾವಣೆಗೆ ಸಂಬಂಧಿಸಿದಂತೆ ಜಿಲ್ಲೆಯಾದ್ಯಂತ ಒಟ್ಟು 2086 ಮತಗಟ್ಟೆಗಳನ್ನು ಸ್ಥಾಪಿಸಲಾಗಿದ್ದು, ಈ ಪೈಕಿ ಪ್ರತಿ ವಿಧಾನಸಭಾವಾರು 05 ಸಖಿ ಮತಗಟ್ಟೆ, 08 ದಿವ್ಯಾಂಗ ಮತಗಟ್ಟೆ, 08 ಯುವ ಮತಗಟ್ಟೆ, 08 ಧ್ಯೇಯ ಮತಗಟ್ಟೆಗಳನ್ನು ಸ್ಥಾಪಿಸಲಾಗಿದೆ. ಜಿಲ್ಲೆಯಾದ್ಯಂತ 171 ಸೂಕ್ಷ್ಮ ಹಾಗೂ 41 ಅತಿ ಸೂಕ್ಷ್ಮ ಮತಗಟ್ಟೆಗಳೆಂದು ಗುರುತಿಸಲಾಗಿದೆ. ಸೂಕ್ಷ್ಮ ಹಾಗೂ ಅತಿ ಸೂಕ್ಷ್ಮ ಮತಗಟ್ಟೆಗಳಿಗೆ ಮೈಕ್ರೋ ಆಬ್ಜರ್ವರ್ ನೇಮಿಸಿದ್ದು, ವೆಬ್‌ಕಾಸ್ಟಿಂಗ್ ಮೂಲಕ ನಿಗಾ ಇಡಲಾಗುತ್ತಿದೆ. ಜಿಲ್ಲೆಯ ಎಲ್ಲ ಮತಗಟ್ಟೆಗಳಲ್ಲಿ ಕನಿಷ್ಠ ಸೌಲಭ್ಯಗಳಾದ ರ್‍ಯಾಂಪ್ ವ್ಯವಸ್ಥೆ, ಕುಡಿಯುವ ನೀರಿನ ವ್ಯವಸ್ಥೆ, ವಿದ್ಯುತ್ ವ್ಯವಸ್ಥೆ, ಪೀಠೋಪಕರಣ, ಮಹಿಳೆಯರು ಹಾಗೂ ಪುರುಷರಿಗೆ ಪ್ರತ್ಯೇಕ ಶೌಚಾಲಯ, ವಿಶ್ರಾಂತಿ ಕೊಠಡಿ, ಆಸನ ವ್ಯವಸ್ಥೆ, ತುರ್ತು ಸಂದರ್ಭದಲ್ಲಿ ಅಂಬುಲೆನ್ಸ್ ವ್ಯವಸ್ಥೆ ಸೇರಿದಂತೆ ಎಲ್ಲ ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳಲಾಗಿದೆ.

ವಿದ್ಯುನ್ಮಾನ ಮತಯಂತ್ರಗಳ ವಿವರ: ಚುನಾವಣೆಗಾಗಿ 2617 ಬಿ.ಯು, 2616 ಸಿ.ಯು, 2773 ವಿವಿಪ್ಯಾಟ್‌ಗಳನ್ನು ಬಳಕೆ ಮಾಡಿಕೊಳ್ಳಲಾಗುತ್ತಿದೆ. ಚುನಾವಣೆ ನಂತರ ಮತ ಯಂತ್ರಗಳನ್ನು ಭದ್ರತೆಯಲ್ಲಿ ಇರಿಸಲು ವಿಧಾನಸಭಾವಾರು ಮತ್ರಯಂತ್ರಗಳನ್ನು ಇರಿಸಲು ಸೈನಿಕಶಾಲೆಯಲ್ಲಿ ಭದ್ರತಾ ಕೊಠಡಿಗಳನ್ನು ಸ್ಥಾಪಿಸಲಾಗಿದ್ದು, ವಿಧಾನಸಭಾವಾರು ವಿವರದಂತೆ ಮುದ್ದೇಬಿಹಾಳ ಹಾಗೂ ದೇವರಹಿಪ್ಪರಗಿ ವಿಧಾನಸಭಾ ಮತಕ್ಷೇತ್ರದ ಮತಯಂತ್ರಗಳನ್ನು ಸೈನಿಕ ಶಾಲೆಯ ಒಡೆಯರ ಸದನದಲ್ಲಿ, ಬಸವನಬಾಗೇವಾಡಿ ಹಾಗೂ ಬಬಲೇಶ್ವರ ಮತಕ್ಷೇತ್ರದ ಮತಯಂತ್ರಗಳನ್ನು ಆದಿಲ್‌ಶಾಹಿ ಸದನದಲ್ಲಿ, ವಿಜಯಪುರ ನಗರ ಹಾಗೂ ನಾಗಠಾಣ ಮತಕ್ಷೇತ್ರದ ಮತಯಂತ್ರಗಳನ್ನು ಹೊಯ್ಸಳ ಸದನದಲ್ಲಿ, ಇಂಡಿ ಹಾಗೂ ಸಿಂದಗಿ ಮತಕ್ಷೇತ್ರದ ಮತಯಂತ್ರಗಳನ್ನು ವಿಜಯಪುರ ನಗರ ಸದನದಲ್ಲಿ ವ್ಯವಸ್ಥೆ ಮಾಡಲಾಗಿದೆ.

ಚುನಾವಣಾ ಸಿಬ್ಬಂದಿಗಳ ವಿವರ : ಚುನಾವಣಾ ಕರ್ತವ್ಯಕ್ಕೆ 2527 ಪಿಆರ್‌ಓ, 2527 ಎಪಿಆರ್‌ಓ, 5054 ಪಿಓ, 184 ಮೈಕ್ರೋ ಆಬ್ಜರ್ವರ್‌ಗಳನ್ನು ನಿಯೋಜಿಸಲಾಗಿದೆ. ನಿಯೋಜಿತ



ಸಿಬ್ಬಂದಿಗಳಿಗೆ ಪ್ರತಿ ಮತಗಟ್ಟೆಗಳಿಗೆ ಆರೋಗ್ಯ ಇಲಾಖೆಯ ಆಶಾ ಕಾರ್ಯಕರ್ತೆಯರನ್ನು ಅವಶ್ಯಕ ಔಷಧೋಪಚಾರದೊಂದಿಗೆ ನಿಯೋಜಿಸಲಾಗಿದೆ. ಚುನಾವಣೆಗೆ ನಿಯೋಜಿಸಿ ಸಿಬ್ಬಂದಿಗಳಿಗೆ ಆಯಾ ಮತಗಟ್ಟೆಗಳಲ್ಲಿ ಹಾಗೂ ಆಯಾ ಮಸ್ಟರಿಂಗ್ ಡಿ ಮಸ್ಟರಿಂಗ್ ಕೇಂದ್ರಗಳಲ್ಲಿ ಉಟೋಪಚಾರ ವ್ಯವಸ್ಥೆ ಮಾಡಲಾಗಿದೆ. ನಿಯೋಜಿತ ಸಿಬ್ಬಂದಿಗಳಿಗೆ 241 ಬಸ್ಸು, 124 ಕ್ರೂಸರ್ ಸೇರಿದಂತೆ ಒಟ್ಟು 365 ವಾಹನಗಳ ವ್ಯವಸ್ಥೆ ಮಾಡಲಾಗಿದೆ. ನಿಯೋಜಿತ ಮತಗಟ್ಟೆ ಸಿಬ್ಬಂದಿಗಳ ಮಕ್ಕಳ ಪಾಲನೆ–ಪೋಷಣೆಗಾಗಿ ದಿ.06–05–2024 ಮತ್ತು 07–05–2024 ರಂದು ಮಕ್ಕಳನ್ನು ನೋಡಿಕೊಳ್ಳಲು ಮಸ್ಟರಿಂಗ್ ಕೇಂದ್ರಗಳಲ್ಲಿ ಶಿಶುಪಾಲನಾ ಕೇಂದ್ರಗಳನ್ನು ಸ್ಥಾಪಿಸಲಾಗಿದೆ. ಮೇಲ್ವಿಚಾರಣೆಗಾಗಿ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳನ್ನು ನೋಡಲ್ ಅಧಿಕಾರಿಗಳನ್ನಾಗಿ ನೇಮಿಸಲಾಗಿದೆ.

ಮತದಾರ ಸೌಲಭ್ಯ ಕೇಂದ್ರ–ಅಂಚೆ ಮತದಾನ ವಿವರ: ಜಿಲ್ಲೆಯಲ್ಲಿ ಅಗತ್ಯ ಸೇವೆಗಳ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಹಾಗೂ ವಿಜಯಪುರ ಲೋಕಸಭಾ ಕ್ಷೇತ್ರದ ಮತದಾರರಿರುವ ಬೇರೆ ಜಿಲ್ಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ–ಸಿಬ್ಬಂದಿಗಳಿಗೆ ಜಿಲ್ಲಾಧಿಕಾ–ರಿಗಳ ಕಾರ್ಯಾಲಯದ ಆವರಣದಲ್ಲಿ ಸ್ಥಾಪಿಸಲಾದ ಮತದಾರರ ಸೌಲಭ್ಯ ಕೇಂದ್ರಗಳಲ್ಲಿ ಹಾಗೂ ಅಂಚೆ ಮತದಾನ ಕೇಂದ್ರಗಳ (ಎಫ್‌ಸಿ &ಪಿವಿಸಿ) ಮೂಲಕ ಮತದಾನ ಮಾಡಲು ಅವಕಾಶ ಕಲ್ಪಿಸಲಾಗಿದ್ದು, ಸದರಿ ಸೌಲಭ್ಯ ಕೇಂದ್ರಗಳಲ್ಲಿ ಅಗತ್ಯ ಸೇವೆಗಳ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ 1969 ಮತದಾರರ ಪೈಕಿ 654 ಹಾಗೂ ಚುನಾವಣಾ ಕರ್ತವ್ಯಕ್ಕೆ ನಿಯೋಜಿಸಿ ಈ ಜಿಲ್ಲೆಯ ಮತದಾರರು ಹಾಗೂ ಈ ಜಿಲ್ಲೆಯ ಮತದಾರರು ಬೇರೆ ಜಿಲ್ಲೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ನೌಕರ ಮತದಾರರು ಒಟ್ಟು 1382ರ ಪೈಕಿ 743 ಮತದಾರರು ಮತ ಚಲಾಯಿಸಿದ್ದಾರೆ.

ಮಾದರಿ ನೀತಿ ಸಂಹಿತೆ: ಜಿಲ್ಲೆಯಲ್ಲಿ ಮಾದರಿ ನೀತಿ ಸಂಹಿತೆ ಉಲ್ಲಂಘಣೆ ಪ್ರಕರಣಗಳ ಮೇಲೆ ನಿಗಾ ಇಡಲು ರಚಿಸಲಾದ ಪೊಲೀಸ್–ಕ್ಷಿಪ್ರ ಪಡೆಗಳು (ಎಫ್–ಎಸ್‌ಟಿ) ಸ್ಥಿರ ಕಣ್ಗಾವಲು ತಂಡಗಳು (ಎಸ್‌ಎಸ್‌ಟಿ), ಆದಾಯ ತೆರಿಗೆ ಸೇರಿದಂತೆ ಒಟ್ಟು 378.51 ಲಕ್ಷ ರೂ. ನಗದು, 21.10ಲಕ್ಷ ರೂ.ಮೌಲ್ಯದ 5210.798 ಲೀ. ಮದ್ಯ, 4.05 ಲಕ್ಷ ರೂ. ಮೌಲ್ಯದ 44.832 ಕಿ.ಗ್ರಾಂ. ಮಾದಕ ವಸ್ತುಗಳನ್ನು ಜಪ್ತಿ ಮಾಡಿಕೊಳ್ಳಲಾಗಿದೆ.

ಕುಂದು ಕೊರತೆ ಪರಿಹಾರ: ಮತದಾರರ ಸಹಾಯವಾಣಿಯಿಂದ ಸ್ವೀಕೃತವಾದ ಒಟ್ಟು 290 ಕರೆಗಳಿಗೆ ಮಾಹಿತಿ ನೀಡಲಾಗಿದೆ. ಹೆಚ್ಚುವ–ರಿಯಾಗಿ ಎನ್.ಜಿ.ಆರ್.ಎಸ್. ಪೋರ್ಟಲ್‌ನಲ್ಲಿ 281 ದೂರುಗಳನ್ನು ದಾಖಲಿಸಲಾಗಿದ್ದು, ಎಲ್ಲ 281 ದೂರುಗಳನ್ನು ವಿಲೇವಾರಿ ಮಾಡಲಾಗಿದೆ. ನೀತಿ ಸಂಹಿತೆ ಉಲ್ಲಂಘನೆಯ 8 ದೂರುಗಳಿಗೆ ಸಂಬಂಧಿಸಿದಂತೆ 3 ದೂರುಗಳು ವಿಚಾರಣಾ ಹಂತದಲ್ಲಿದ್ದು, ಅಧಿಕಾರಿ–ನೌಕರರ ವಿರುದ್ದ ಸ್ವೀಕೃತವಾದ 38 ದೂರುಗಳ ಪೈಕಿ 36 ದೂರುಗಳನ್ನು ನಿಖಾಲಿ ಮಾಡಲಾಗಿದೆ. ಬಾಕಿ 2 ದೂರುಗಳು ವಿಚಾರಣೆಯಲ್ಲಿವೆ. ಇತರೆ ಚುನಾವಣೆಗೆ ಸಂಬಂಧಿಸಿದ 7 ದೂರುಗಳ ಪೈಕಿ 4 ದೂರುಗಳು ನಿಖಾಲಿಯಾಗಿದ್ದು, 3 ದೂರುಗಳು ವಿಚಾರಣೆ ಹಂತದಲ್ಲಿವೆ. ಸುವಿಧಾ ಅಡಿಯಲ್ಲಿ 250 ಅರ್ಜಿಗಳ ಪೈಕಿ 215 ಅರ್ಜಿ ಅಂಗೀಕರಿಸಲಾಗಿದೆ. 19 ಅರ್ಜಿಗಳನ್ನು ತಿರಸ್ಕರಿಸಲಾಗಿದೆ. 3 ಅರ್ಜಿಗಳು ಬಾಕಿ ಇವೆ, 13 ಅರ್ಜಿಗಳನ್ನು ರದ್ದುಗೊಳಿಸಲಾಗಿದೆ.

ಕಾನೂನು ಸುವ್ಯವಸ್ಥೆ : ಜಿಲ್ಲೆಯಲ್ಲಿ ಶಾಂತಿಯುತ ಹಾಗೂ ಪಾರದರ್ಶಕ ಮತದಾನಕ್ಕಾಗಿ ಎಲ್ಲ ಅಗತ್ಯ ವ್ಯವಸ್ಥೆ ಕೈಗೊಳ್ಳಲಾಗಿದ್ದು, ಕಾನೂನು ಸುವ್ಯವಸ್ಥೆ ಕಾಪಾಡಲು 02 ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾ–ರಿಗಳು, 8 ಡಿಎಸ್‌ಪಿ, 26 ಸಿಪಿಐ, 95 ಪಿಎಸ್‌ಐ, 121 ಎಎಸ್‌ಐ, 704 ಹೆಚ್.ಸಿ., 1187 ಪಿಸಿ, 945 ಎಚ್‌ಜಿ, 11 ಎಫ್‌ಜಿ ಸೇರಿದಂತೆ 3099 ಜನರು ಸೇರಿದಂತೆ 55 ಸಿಎಪಿಎಫ್ ಹಾಗೂ 5 ಐಆರ್‌ಬಿ–ಕೆಎಸ್‌ಆರ್‌ಪಿ ತುಕಡಿಗಳನ್ನು ನಿಯೋಜಿಸಲಾಗಿದೆ. ಜಿಲ್ಲೆಯಲ್ಲಿ ಲೈಸನ್ಸ್ ಹೊಂದಿರುವ ಒಟ್ಟು 2363 ಆಯುಧಗಳ ಪೈಕಿ 2274 ಜಮಾ ಮಾಡಲಾಗಿದ್ದು, 54 ಆಯುಧಗಳನ್ನು ವಿನಾಯಿತಿ ನೀಡಲಾಗಿದೆ.

ನಿಷೇಧಾಜ್ಞೆ: ಶೂನ್ಯ ಅವಧಿ (ಕೊನೆಯ 48 ಗಂಟೆಗಳು) ಯಲ್ಲಿ ಸಾರ್ವಜನಿಕ ಸಭೆಗಳನ್ನು ನಡೆಸುವುದು ನಿಷೇಧಿಸಲಾಗಿದೆ. 5ಕ್ಕಂತ ಹೆಚ್ಚಿನ ಜನರು ತಿರುಗಾಡುವುದನ್ನು ನಿಷೇಧಿಸಿದೆ. ಮದ್ಯಪಾನ ಮಾರಾಟ ನಿಷೇಧಿಸಿದೆ. ಧ್ವನಿವರ್ಧಕಗಳನ್ನು ಬಳಸುವುದನ್ನು ನಿಷೇಧಿಸಲಾಗಿದೆ. ಕ್ಷೇತ್ರದ ಮತದಾರರಲ್ಲದ ರಾಜಕೀಯ ವ್ಯಕ್ತಿಗಳು ಕ್ಷೇತ್ರವನ್ನು ತೊರೆಯುವಂತೆ ತಿಳಿಸಿದೆ.

ಪ್ರಜಾಸತ್ತಾತ್ಮಕ ವಿಧಾನದ ಮೂಲಕ ಸುಭದ್ರವಾದ ಸರ್ಕಾರವನ್ನು ರಚಿಸುವ ಪ್ರಕ್ರಿಯೆಯಲ್ಲಿ ಪ್ರತಿಯೊಂದು ಮತವು ಅಮೂಲ್ಯವಾಗಿರುವುದರಿಂದ ಜಿಲ್ಲೆಯ ಅರ್ಹ ಎಲ್ಲ ಮತದಾರರು ಮತದಾನದ ಹಬ್ಬದಲ್ಲಿ ಭಾಗವಹಿಸಿ ತಪ್ಪದೇ ಮತ ಚಲಾಯಿಸುಂತೆ ಅವರು ಮನವಿ ಮಾಡಿಕೊಂಡಿದ್ದಾರೆ.

**Printed by:** AVINASH BIDARI, **Published and Onwed by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR